MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com   Yuva Marga   yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 96 | ಶನಿವಾರ : 31-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 96 | SATURDAY : 31-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

* ಎಸ್ಪಿ, ಸಿಇಓ ಸಮ್ಮುಖದಲ್ಲಿ ವಿಶೇಷ ಸಭೆ * ವಿವಿಧೆಡೆ ಚೆಕ್‌ಪೋಸ್ಟ್ ಸ್ಥಾಪನೆಗೆ ವಿಶೇಷ ಸೂಚನೆ * ಪೊಲೀಸ್ ಕಣ್ಗಾವಲಿಗೆ ಎಸ್ಪಿ ಅರುಣಾಂಗ್ಶು ನಿರ್ದೇಶನ

# ರಾಯಚೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಡಿ.ಸಿ. ನಿತೀಶ್ ಕೆ ಖಡಕ್ ಸೂಚನೆ

ಯುವಮಾರ್ಗ ಸುದ್ದಿ

**ರಾಯಚೂರು,ಜ.30–** ದೇವದುರ್ಗ, ಸಿರವಾರ, ಮಾನವಿ, ಸಿಂಧನೂರ ಮತ್ತು ಲಿಂಗಸೂರ ತಾಲೂಕು ಸೇರಿದಂತೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಅನಧೀಕೃತವಾಗಿ ಮರಳು ಸಾಗಣೆ ಕೂಡಲೇ ನಿಲ್ಲಬೇಕು. ಯಾವುದೇ ಕಡೆಗಳಲ್ಲಿ ರಾಜಾರೋಷವಾಗಿ ಮರಳು ಎತ್ತುವುದು ಕಂಡು ಬಂದಲ್ಲಿ ಅದನ್ನು ಸಹಿಸಲಾಗುವುದಿಲ್ಲ. ಅವರು ಎಷ್ಟೇ ಪ್ರಭಾವಿಗಳಾಗಿರಲಿ, ಯಾರೇ ಇರಲಿ ಅಂತವರ ಮೇಲೆ ಮುಲಾಜಿಲ್ಲದೇ ಕ್ರಮ ಜರುಗಿಸಲು ಹಿಂದೆ ಮುಂದೆ ನೋಡುವುದಿಲ್ಲ ಎಂದು ಜಿಲ್ಲಾ ಟಾಸ್ಕ್‌ಫೋರ್ಸ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಕಡಕ್ ಎಚ್ಚರಿಕೆ ನೀಡಿದರು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 30ರಂದು ನಡೆದ ಜಿಲ್ಲಾ ಟಾಸ್ಕ್‌ಫೋರ್ಸ ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಕಲ್ಲು ಪುಡಿ ಮಾಡುವ ಘಟಕಗಳ ಲೈಸೆನ್ಸ್ ನೀಡಿಕೆ ಮತ್ತು ನಿಯಂತ್ರಣ ಪ್ರಾಧಿಕಾರದ ಸಮಿತಿಯ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆಯ ದೇವದುರ್ಗ, ಮಾನವಿ ಸೇರಿದಂತೆ ಇನ್ನೀತರ ಕಡೆ ಅನಧೀಕೃತ ಮರಳು ಸಾಗಣೆ ಅವ್ಯಾಹತ ನಡೆಯುತ್ತಿದ್ದು, ಇದಕ್ಕೆ ಬ್ರೇಕ್ ಹಾಕಲು ಅಧಿಕಾರಿಗಳು ಕ್ರಮ ವಹಿಸಬೇಕು ಎನ್ನುವ ವಿಷಯವು ಕೆಡಿಪಿ ಸಭೆ ಮತ್ತು ಇನ್ನಿತರ ಸಭೆಗಳಲ್ಲಿ ಮತ್ತೆ ಮತ್ತೆ ಚರ್ಚೆಗೆ ಬರುತ್ತಿದೆ. ಈ ವಿಷಯವನ್ನು ಜಿಲ್ಲಾಡಳಿತವು ಗಂಭೀರವಾಗಿ ಪರಿಗಣಿಸಿದೆ. ಈ ಲ್ಯಾಂಡ್ ಮಾಫಿಯಾದಲ್ಲಿ ಯಾವುದೇ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿಯಾಗಕೂಡದು. ಈ ಅಕ್ರಮ ಮರಳು ದಂಧೆಯಲ್ಲಿ ಭಾಗಿಯಾಗಿ, ಅಧಿಕಾರಿಗಳು ಮತ್ತು ಸಿಬ್ಬಂದಿಯು ನೋಡಿಯೂ ನೋಡದಂತೆ ಇದ್ದರೆ, ಅಕ್ರಮ ಮರಳು ದಂಧೆಗೆ ಕುಮ್ಮಕ್ಕು ನೀಡಿದರೆ ಸಹಾಯಕ ಆಯುಕ್ತರು, ಪೊಲೀಸ್ ಉಪಾಧೀಕ್ಷಕರು, ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ಪಿಡಿಓ ಯಾರೇ ಇರಲಿ ಅಂತಹ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಅಮಾನತುಗೊಳಿಸಲು ಕೂಡಲೇ ಶಿಫಾರಸ್ಸು ಮಾಡಲಾಗುವುದು. ಪ್ರಕರಣವು ಗಂಭೀರವಾಗಿದ್ದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಮೇಲೆಯೇ ಎಫ್‌ಐಆರ್ ದಾಖಲಿಸಿ ಶಾಶ್ವತವಾಗಿ ಮನೆಗೆ ಕಳುಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

**ವಿಶೇಷ ಕಾರ್ಯಾಚರಣೆಗೆ ಸೂಚನೆ:** ಅಕ್ರಮ ಮರಳು ಸಾಗಣೆಗೆ ಬ್ರೇಕ್ ಹಾಕಬೇಕು ಎಂಬುದು ದೇವದುರ್ಗ ಸಿಟಿ ಜನರು ಹಾಗೂ ಆ ತಾಲೂಕಿನ 48 ಹಳ್ಳಿಗಳ ಒಕ್ಕೋರಲಿನ ಮನವಿ ಮತ್ತು ಒತ್ತಾಯವಾಗಿದೆ. ಈ ಹಿನ್ನಲೆಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡವಾಗಿ ದೇವದುರ್ಗ ತಾಲೂಕಿನಲ್ಲಿ ವಾರಗಳ ಕಾಲ ವಿಶೇಷ ಕಾರ್ಯಾಚರಣೆಗಿಳಿಯಬೇಕು. ದೇವದುರ್ಗ ಮತ್ತು ಮಾನವಿಯಲ್ಲಿ ಆರ್‌ಟಿಓ ಅಧಿಕಾರಿಗಳು ವಿಶೇಷ ಡ್ರೈವ್ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

**ಪೊಲೀಸ್ ರಕ್ಷಣೆಗೆ ಪಡೆದುಕೊಳ್ಳಿ:** ನೇಮ್ ಪ್ಲೇಟ್ ಇಲ್ಲದೇ ಮಣ್ಣು ತುಂಬಿಕೊಂಡು ಓಡಾಡುವ ಟಿಪ್ಪರ್, ಟ್ರಾಕ್ಟರ್‌ಗಳ ಮೇಲೆ ಕಣ್ಣಿಟ್ಟು ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ದಾಳಿ ನಡೆಸಿ



ಅಂತಹ ವಾಹನಗಳನ್ನು ಸೀಜ್ ಮಾಡಬೇಕು. ಹೇವಿ ಪೆನಾಲ್ಟಿ ಹಾಕಿ ಬಿಸಿ ಮುಟ್ಟಿಸಬೇಕು, ಸೀಜ್ ಮಾಡಿ ಸುಮ್ಮನೆ ಬಿಡಬಾರದು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ಚೆಕ್‌ಪೋಸ್ಟ್ ಸ್ಥಾಪನೆಗೆ ಸೂಚನೆ:** ಜಾಲಹಳ್ಳಿ, ಗಬ್ಬೂರ ಸೇರಿದಂತೆ ದೇವದುರ್ಗ, ಸಿರವಾರ, ಲಿಂಗಸೂರು, ಮಾನವಿ, ಸಿಂಧನೂರ ತಾಲೂಕಿನ ವಿವಿಧೆಡೆ ಕೂಡಲೇ ಚೆಕ್‌ಪೋಸ್ಟ್ ಸ್ಥಾಪನೆಗೆ ಕ್ರಮವಹಿಸಿ ಅಕ್ರಮ ಮರಳು ಸಾಗಣೆ ತಡೆಯಬೇಕು. ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಗೃಹರಕ್ಷಕ ದಳದ ಸಿಬ್ಬಂದಿ ಸೇರಿ ಒಟ್ಟು ಮೂರು ತಂಡಗಳಾಗಿ ಚೆಕ್‌ಪೋಸ್ಟನಲ್ಲಿ ನಿಗಾ ಇಡಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿಯಿಂದಲೇ ಯಾವುದೇ ಮೇಸೇಜ್ ಪಾಸಾಗದಂತೆ ಜಾಗರೂಕರೆವಹಿಸಿ ಬೇರೆ ಬೇರೆ ಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಚೆಕ್‌ಪೋಸ್ಟಗಳಿಗೆ ನಿಯೋಜನೆ ಮಾಡಬೇಕು. ಬೇರೆ ಬೇರೆ ಇಲಾಖೆಗಳಲ್ಲಿನ ಎಫ್‌ಡಿಎ, ಎಸ್‌ಡಿಎ ಸೇರಿದಂತೆ ಇನ್ನೀತರ ಸಿಬ್ಬಂದಿಯನ್ನು (**2ನೇ ಪುಟಕ್ಕೆ**>>>)

## ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ಜಾತ್ರಮಹೋತ್ಸವ ಅಂಗವಾಗಿ ನಡೆದ ಹರಾಜಿನಿಂದ 52 ಲಕ್ಷ ಅದಾಯ: ಭೀಮರಾಯ ಬಿ.ರಾಮಸಮುದ್ರ

ಯುವಮಾರ್ಗ ಸುದ್ದಿ

**ಮಾನ್ವಿ,ಜ.30–**ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಗುರುವಾರ ಸಂಜೆ ಮುಜೂರಾಯಿ ಇಲಾಖೆಗೆ ಸೇರಿದ ಪ್ರಸಿದ್ದ ಪುಣ್ಯಕ್ಷೇತ್ರವಾದ ನೀರಮಾನ್ವಿ ಗ್ರಾಮದ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಫೆ.6ರಂದು ನಡೆಯುವ ಜಾತ್ರ ಮಹೋತ್ಸವದ ಅಂಗವಾಗಿ ವಿವಿಧ ಸೇವೆಗಳಿಗೆ ನಡೆದ ಹರಾಜು ಪ್ರಕ್ರಿಯೆಯಲ್ಲಿ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಆಡಳಿತಾಧಿಕಾರಿಗಳು ಹಾಗೂ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಪ್ರಸಿದ್ದ ಪುಣ್ಯಕ್ಷೇತ್ರವಾದ ನೀರಮಾನ್ವಿ ಗ್ರಾಮದ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಪ್ರತಿ ವರ್ಷ ನಡೆಯುವ ಜಾತ್ರ ಮಹೋತ್ಸವ ಹಾಗೂ ದೀಪಾವಳಿ ಪಾಡ್ಯ ಮಹೋತ್ಸವಗಳಲ್ಲಿ ಭಕ್ತರು ರಾಜ್ಯ ಸೇರಿದಂತೆ ವಿವಿಧ ರಾಜ್ಯಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲಿದ್ದಾರೆ ಜಾತ್ರೆ ಇರುವ ದಿನಗಳಾದ ಫೆ.1ರಿಂದ ಫೆ.10 ರವರಿಗೆ ಭಕ್ತರಿಗಾಗಿ ತೆಂಗಿನಕಾಯಿ



ಸಗಟು ಮಾರಾಟಕ್ಕಾಗಿ ನಡೆದ ಹರಾಜಿನಲ್ಲಿ 15 ಲಕ್ಷ ರೂಗಳಿಗೆ ರಮೇಶ ಎನ್ನುವವರು ಪಡೆದಿದ್ದಾರೆ. ಮಂಗಳಾರತಿ ಮತ್ತು ಕಾಯಿ ಒಡೆಯುವುದಕ್ಕೆ 6 ಲಕ್ಷ ರೂ ಗಳಿಗೆ ಅರಕೇರಾ ವಿರೇಶ ಎನ್ನುವವರು ಪಡೆದಿದ್ದಾರೆ. ಜಾತ್ರೆ ಸಮಯದಲ್ಲಿ ಅಂಗಡಿ ಹಾಕುವುದಕ್ಕೆ ಜಾಗವನ್ನು ಹನುಮಂತ ತಾಸಿ ಎನ್ನುವವರು 10 ಲಕ್ಷ 25 ಸಾವಿರ ರೂಗಳಿಗೆ ಪಡೆದಿದ್ದಾರೆ. ಜಾತ್ರೆ ನಡೆಯುವ ಹತ್ತು ದಿನಗಳನ್ನು ಹೊರತು ಪಡೆಸಿ ಒಂದು ವರ್ಷದ ಅವಧಿಗಾಗಿ ಕಾಯಿ ಮತ್ತು ಮಂಗಳಾರತಿ ಸೇವೆಗಾಗಿ ಅಯ್ಯಣ್ಣ ಬಾಗೋಡಿ ಯವರು 21ಲಕ್ಷದ 15 ಸಾವಿರಕ್ಕೆ ಪಡೆದುಕೊಂಡಿದ್ದಾರೆ. ಈ ಹಾರಜಿನಿಂದಾಗಿ ಒಟ್ಟು 52 ಲಕ್ಷದ 42 ಸಾವಿರ ರೂಗಳ ಅದಾಯ ಸರ್ಕಾರದ ಮುಜೂರಾಯಿ ಇಲಾಖೆಗೆ ದೊರತ್ತಂತೆ ಆಗಿದೆ. ಎಂದು ತಿಳಿಸಿದರು.

ಹರಾಜಿನಲ್ಲಿ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಕಾರ್ಯದರ್ಶಿಗಳಾದ ಕಂದಾಯ ನಿರೀಕ್ಷಕರಾದ ಚರಣಸಿಂಗ್, ಗ್ರಾಮಲೆಕ್ಕಾಧಿಕಾರಿ ಸಿಂಧು,ದೇವಸ್ಥಾನದ ಮಲ್ಲಿಕಾರ್ಜುನ ಪೂಜಾರಿ, ಸೇರಿದಂತೆ ಗ್ರಾಮಸ್ಥಾರು ಹರಾಜು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಸಿರವಾರ: ರಸ್ತೆಯಲ್ಲಿ ಬಿಡಾಡಿ ದನ ಬಿಟ್ಟರೆ ದಂಡ! ಪಟ್ಟಣ ಪಂಚಾಯತಿಯಿಂದ ವಾಹನದ ಮೂಲಕ ಕಟ್ಟುನಿಟ್ಟಿನ ಎಚ್ಚರಿಕೆ

ಯುವಮಾರ್ಗ ಸುದ್ದಿ

**ಸಿರವಾರ,ಜ.30–**ಸಿರವಾರ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬೀದಾಡಿ ದನಗಳ ಹಾವಳಿ ಮಿತಿಮೀರಿದ್ದು, ಸಾರ್ವಜನಿಕರ ಸುಗಮ ಸಂಚಾರಕ್ಕೆ ಮತ್ತು ಸುರಕ್ಷತೆಗೆ ಧಕ್ಕೆಯಾಗುತ್ತಿದೆ. ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಸಿರವಾರ ಪಟ್ಟಣ ಪಂಚಾಯತ್, ಜಾನುವಾರು ಮಾಲಕರಿಗೆ ಅಂತಿಮ ಎಚ್ಚರಿಕೆ ನೀಡಿದ್ದು, ನಿಯಮ ಉಲ್ಲಂಘಿಸಿದರೆ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸುವುದಾಗಿ ಘೋಷಿಸಿದೆ.



ಪಟ್ಟಣದ ಅಂಬೇಡ್ಕರ್ ವೃತ್ತ, ಮಾರುಕಟ್ಟೆ ಪ್ರದೇಶ ಹಾಗೂ ಪ್ರಮುಖ ರಸ್ತೆಗಳಲ್ಲಿ ದನಗಳು ಗುಂಪು ಗುಂಪಾಗಿ ನಿಲ್ಲುತ್ತಿರುವುದರಿಂದ ಸಂಚಾರ ದಟ್ಟಣೆ: ಬಸ್ ಹಾಗೂ ಇತರೆ ವಾಹನಗಳ ಸಂಚಾರಕ್ಕೆ ಗಂಟೆಗಟ್ಟಲೆ ಅಡ್ಡಿಯಾಗುತ್ತಿದೆ.ಅಪಘಾತದ ಆತಂಕ: ದ್ವಿಚಕ್ರ ವಾಹನ ಸವಾರರು ಅಚಾನಕ್ ಆಗಿ ಅಡ್ಡ ಬರುವ ದನಗಳಿಂದಾಗಿ ಬಿದ್ದು ಗಾಯಗೊಂಡಿರುವ ಘಟನೆಗಳು ಸಂಭವಿಸಿವೆ.ಅಶುಚಿತ್ವ: ಪಟ್ಟಣದ ಸೌಂದರ್ಯೀಕರಣಕ್ಕೆ ದನಗಳ ಮಲಮೂತ್ರ ವಿಸರ್ಜನೆ ಅಡ್ಡಿಯಾಗುತ್ತಿದೆ.

**ಪಂಚಾಯತ್ ಮುಖ್ಯಾಧಿಕಾರಿಗಳ ಕಟ್ಟುನಿಟ್ಟಿನ ಆದೇಶ:** ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಮಾಲಕರಿಗೆ ಈ ಕೆಳಗಿನ ಸೂಚನೆಗಳನ್ನು ನೀಡಿದ್ದಾರೆ:

ಜಾನುವಾರುಗಳ ಬಂಧನ: ರಸ್ತೆಯಲ್ಲಿ ಅಡ್ಡಾದಿಡ್ಡಿ ಬಿಟ್ಟಿರುವ ದನಗಳನ್ನು ಪಂಚಾಯತ್ ವತಿಯಿಂದ ಕಾರ್ಯಾಚರಣೆ ನಡೆಸಿ ವಶಕ್ಕೆ ಪಡೆಯಲಾಗುವುದು.

**ದಂಡ ಪ್ರಯೋಗ:** ವಶಪಡಿಸಿಕೊಂಡ ಜಾನುವಾರುಗಳನ್ನು ಮಾಲಕರು ಬಿಡಿಸಿಕೊಳ್ಳಲು ಬಂದರೆ, ಸಾರ್ವಜನಿಕರಿಗೆ ತೊಂದರೆ ನೀಡಿದ್ದಕ್ಕಾಗಿ ಭಾರೀ ಮೊತ್ತದ ದಂಡ ವಿಧಿಸಲಾಗುವುದು.

**ಗೋಶಾಲೆಗೆ ರವಾನೆ:** ವಾರಸುದಾರರು ಇಲ್ಲದ ಅಥವಾ ಮಾಲಕರು ಜವಾಬ್ದಾರಿ ವಹಿಸದ ದನಗಳನ್ನು ನೇರವಾಗಿ ಜಿಲ್ಲಾ ಗೋಶಾಲೆಗಳಿಗೆ ಕಳುಹಿಸಲಾಗುವುದು. ವಾಹನ ಮೂಲಕ ಎಚ್ಚರಿಕೆ ಸಂದೇಶ ಸಾರಿದರು.

**ಕಾನೂನು ಕ್ರಮ:** ನಿರ್ಲಕ್ಷ್ಯ ವಹಿಸುವ ಮಾಲಕರ ಮೇಲೆ ಸಾರ್ವಜನಿಕರ ಆಸ್ತಿಗೆ ಹಾನಿ ಹಾಗೂ ಸುರಕ್ಷತೆಗೆ ಧಕ್ಕೆ ತಂದ ಹಿನ್ನೆಲೆಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು. (**2ನೇ ಪುಟಕ್ಕೆ**>>>)

# ಸಾರ್ವಜನಿಕರಿಗೆ ರಸ್ತೆ ಸುರಕ್ಷತೆ ಜಾಗೃತಿ ಅಗತ್ಯ: ನ್ಯಾ.ಮಾರುತಿ ಬಾಗಡೆ



ಯುವಮಾರ್ಗ ಸುದ್ದಿ

**ರಾಯಚೂರು,ಜ.30–** ದೇಶದಲ್ಲಿ ಪ್ರತಿನಿತ್ಯ ಅಪಘಾತ ಪ್ರಕರಣಗಳು ಹೆಚ್ಚುತ್ತಿದ್ದು, ರಸ್ತೆ ಸುರಕ್ಷತೆಯ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಸೇರಿದಂತೆ ಪ್ರತಿಯೊಬ್ಬರು ಜಾಗೃತಿ ಹೊಂದುವ ಅಗತ್ಯವಿದೆ ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಾರುತಿ ಬಾಗಡೆ ಅವರು ಹೇಳಿದರು.

ಜನವರಿ 30ರ ಶುಕ್ರವಾರ ದಂದು ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾವಾದಿಗಳ ಸಂಘ, ಜಿಲ್ಲಾ ಪೊಲೀಸ್ ಇಲಾಖೆ, ರೋಟರಿ ಕ್ಲಬ್, ರೊಟರಿ ಕ್ಲಬ್ ಕೃಷ್ಣ ತುಂಗೆ ಮತ್ತು ಮಾನವ ಹಕ್ಕುಗಳು ಹಾಗೂ ಭ್ರಷ್ಟಚಾರ ವಿರೋಧಿ ಸಂಸ್ಥೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಕಷ್ಟು ಮಂದಿಗೆ ಅರಿವಿನ ಅಗತ್ಯವಿದ್ದು, ಹೆಲ್ಮೆಟ್ ರಹಿತ ಹಾಗೂ ಕುಡಿದ ಮತ್ತಿನಲ್ಲಿ ವಾಹನ ಚಾಲನೆ, ಮೊಬೈಲ್ ಫೋನ್ ಬಳಕೆ, ಅತೀವೇಗದಿಂದ ಚಾಲನೆ ಮಾಡುವುದರಿಂದ ಅನೇಕ ಸಾವು ನೋವುಗಳು ಸಂಭವಿಸುತ್ತಿವೆ. ಇವುಗಳ ನಿಯಂತ್ರಣಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದರು.

ಪ್ರಸ್ತುತ ದಿನಮಾನಗಳಲ್ಲಿ ಯುವಕರು, ಚಿಕ್ಕ ಮಕ್ಕಳು ಅತ್ಯಂತ ವೇಗವಾಗಿ ದ್ವಿಚಕ್ರ ವಾಹನ ಚಾಲನೆ ಮಾಡುವ ಮೂಲಕ ಸಂಚಾರಿ ನಿಯಮಗಳನ್ನು ಯಾರೂ ಪಾಲಿಸುತ್ತಿಲ್ಲ. ಸಂಚಾರಿ ನಿಯಮಗಳನ್ನು ಉಲ್ಲಂಘಿಸಿದ್ದರಿಂದ ಆಕಸ್ಮಿಕ ಅಪಘಾತಗಳು ನಡೆಯುತ್ತವೆ. ಇದರಿಂದ ಜೀವ ಹಾನಿಯಾಗುತ್ತದೆ ಎಂದರು.

ದ್ವಿಚಕ್ರ ವಾಹನ ಚಾಲನೆ ಮಾಡುವವರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಲೇಬೇಕು. ನ್ಯಾಯಾಲಯದಲ್ಲಿ ಬರುವ ಅಪಘಾತ ಪ್ರಕರಣಗಳಲ್ಲಿ ಹೆಚ್ಚಾಗಿ ತಲೆಗೆ ಪೆಟ್ಟು ಬಿದ್ದು ಸಾವನ್ನಪ್ಪಿದವು ಅಥವಾ ಅಂಗಾಂಗಗಳನ್ನು ಕಳೆದುಕೊಂಡ ಪ್ರಕರಣಗಳಾಗಿರುತ್ತವೆ. ಒಂದು ಸಾವಿರ ರೂ. ಹಣದ ಬಗ್ಗೆ ಯೋಚಿಸದೇ ಕೂಡಲೇ ಹೆಲ್ಮೆಟ್ ಖರೀದಿಸಿ ಬಳಸಿದಲ್ಲಿ ಅತ್ಯಮೂಲ್ಯವಾದ ಈ ಜೀವನ ಉಳಿಯುತ್ತದೆ. ದ್ದರಿಂದ ಜನರು ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಬೇಕೆಂದರು. ಈ ವೇಳೆ ಕೃಷ್ಣ ತುಂಗೆ ರೋಟರಿ ಕ್ಲಬ್ ಅಧ್ಯಕ್ಷರಾದ ಪವನ ಕುಮಾರ್ ಕಿಶೋರ್ ಪಾಟೀಲ ಅವರು ಮಾತನಾಡಿ, (**2ನೇ ಪುಟಕ್ಕೆ**>>>)

# ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆ




ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.30–**ರಾಷ್ಟ್ರೀಯ ಸ್ವಚ್ಛತಾ ದಿನಾಚರಣೆಯ ಪ್ರಯುಕ್ತ ನ್ಯಾಯಾಲಯದ ಸಂಕೀರ್ಣ ಮತ್ತು ವಕೀಲರ ಭವನ ಸುತ್ತಮೂತ್ತ ಸ್ವಚ್ಛ ಮಾಡಲಾಯಿತು.

ನ್ಯಾಯಧೀಶರು ಉಂಡಿ ಮಂಜುಳಾ ಶಿವಪ್ಪ ಮಾತನಾಡಿ,

ಮಹಾತ್ಮ ಗಾಂಧಿ ಕಂಡ ಸ್ವಚ್ಛ ಭಾರತದ ಕನಸು ನನಸು ಮಾಡಲು ಪ್ರತಿಯೊಬ್ಬ ನಾಗರೀಕನು ಮುಂದಾಗಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಭೂಪನಗೌಡ ಪಾಟೀಲ್, ಪುರಸಭೆ ಮುಖ್ಯಾಧಿಕಾರಿ ನಟರಾಜ, ಬಸಲಿಂಗಪ್ಪ ವಕೀಲರು, ಬಾಲರಾಜ ಸಾಗರ ಮಾನಮಟ್ಟಿ ವಕೀಲರು, ದೇವೆಂದ್ರ ನಾಯಕ ವಕೀಲರು, ಹನುಮಂತ ರೆಡ್ಡಿ ವಕೀಲರು, ಹಾಗೂ ಪುರಸಭೆ ಅಧಿಕಾರಿಗಳು, ಸಿಬ್ಬಂದಿಗಳು, ಸ್ವಚ್ಛತಾ ಸಿಬ್ಬಂದಿಗಳು, ನ್ಯಾಯಾಲಯದ ಎಲ್ಲ ಸಿಬ್ಬಂದಿಗಳು ಹಾಗೂ ವಕೀಲರು ಭಾಗವಹಿಸಿದ್ದರು.

# ಮೊದಲನೇಯ ಪುಟದಿಂದ

## ರಾಯಚೂರು ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಕಡಿವಾಣಕ್ಕೆ ಡಿ.ಸಿ. ನಿತೀಶ್ ಕೆ ಖಡಕ್ ಸೂಚನೆ

ಕಾರ್ಯಾಚರಣೆ ನಡೆಸುವ ಸಮಿತಿಗೆ ಸೇರಿಸಿಕೊಂಡು ಅವರಿಗೆ ಜವಾಬ್ದಾರಿ ಹಂಚಿಕೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಿಸಿ ಟಿವಿ ಅಳವಡಿಕೆಗೆ ಸೂಚನೆ: ಬೇರೆ ಬೇರೆ ಕಡೆಗಳಲ್ಲಿ ಸಿಸಿ ಟಿವಿ ಅಳವಡಿಸಿ ಅವರು ಕಾರ್ಯ ನಿರ್ವಹಿಸುವಂತೆ ನೋಡಿ ನಿಗಾ ವಹಿಸಬೇಕು. ಸಿಟಿ ಟಿವಿ ರೆಕಾರ್ಡ್ ಇಟ್ಟುಕೊಳ್ಳಬೇಕು. ಸಿಸಿಟಿವಿ ಅಳವಡಿಸಿಲ್ಲ ಎಂದು ಯಾವುದೇ ಕಾರಣಕ್ಕೂ ಸಬೂಬು ಹೇಳುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸೀಜ್ ಮಾಡಿದ ಸ್ಯಾಂಡ್ ವಿಲೆಗೆ ಸೂಚನೆ: ಜಿಲ್ಲೆಯಲ್ಲಿ ಕೆಕೆಆರ್‌ಡಿಬಿಯಿಂದ ವಿವಿಧ ಕಾಮಗಾರಿಗಳು ನಡೆಯುತ್ತಿವೆ. ಜಲಧಾರೆಯ ದೊಡ್ಡ ಪ್ರೊಜೆಕ್ಟ್ ಅನುಷ್ಠಾನವಾಗುತ್ತಿದೆ. ನಿರ್ಮಿತಿ ಕೇಂದ್ರದಿಂದಲೂ ಕೆಲವು ಕಾಮಗಾರಿಗಳು ಚಾಲ್ತಿಯಲ್ಲಿವೆ. ಇಂತಹ ಕಾಮಗಾರಿಗಳಿಗೆ ಮಣ್ಣು ಬೇಕಾಗುತ್ತದೆ. ಇದುವರೆಗೆ ಜಪ್ತಿ ಮಾಡಿದ ಮಣ್ದಿಗೆ ನಿಯಮಾನುಸಾರ ಇ ಹರಾಜು ಪ್ರಕ್ರಿಯೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಯುಕ್ತರು, ತಹಸೀಲ್ದಾರಗೆ ಸೂಚನೆ: ಸಹಾಯಕ ಆಯುಕ್ತರು ಮತ್ತು ತಹಸೀಲ್ದಾರರು ಅಕ್ರಮ ಮರಳು ಸಾಗಣೆ ಪ್ರಕರಣಗಳ ಬಗ್ಗೆ ವಿಶೇಷ ನಿಗಾವಹಿಸಬೇಕು. ತಮ್ಮ ಹಂತದಲ್ಲಿ ತಂಡಗಳನ್ನು ರಚಿಸಿಕೊಂಡು ಆಯಾ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಯಾವ ಕಡೆಗೆ ಎಷ್ಟು ದಾಳಿ ಮಾಡಿದ್ದೀರಿ ಎಂಬುದರ ಬಗ್ಗೆ ಟಾರ್ಗೆಟ್ ನೀಡಬೇಕು. ತಮ್ಮ ಹಂತದಲ್ಲಿ ದಾಳಿ ನಡೆಸಿ ಜೆಸಿಬಿ, ಟಿಪ್ಪರ್, ಟ್ರಾಕ್ಟರ್ ಸೀಜ್ ಮಾಡಿ ಬಿಸಿಮುಟ್ಟಿಸಬೇಕು ಎಂದು ಸೂಚನೆ ನೀಡಿದರು.

ಆರ್‌ಟಿಓ ಅಧಿಕಾರಿಗಳಿಗೆ ಸೂಚನೆ:

ತಂಡವಾಗಿ ಕೆಲಸ ಮಾಡಿ: ಪೊಲೀಸ್ ಸೇರಿದಂತೆ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಂಡವಾಗಿ ಕೆಲಸ ಮಾಡಬೇಕು. ರಾತ್ರಿ 9 ಗಂಟೆಯಿಂದ ಬೆಳಗಿನ 7 ಗಂಟೆವರೆಗಿನ ಅವಧಿಯಲ್ಲಿ ವಿಶೇಷ ನಿಗಾವಹಿಸಬೇಕು. ಒಂದೇ ವಾಹನಕ್ಕೆ ಅನುಮತಿ ಪಡೆದು ಒಂದೇ ನೇಮ್ ಪ್ಲೇಟ್ ಮೇಲೆ ನಾಲ್ಕಾರು ಗಾಡಿ ಓಡಿಸುವ ಜಾಲದ ಬಗ್ಗೆ ಗಮನ ಹರಿಸಬೇಕು ಎಂದು ಇದೆ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ದೂರುಗಳ ದಾಖಲಿಸಿ: ಜಿಲ್ಲಾ ಪಂಚಾಯತ್ ಸಿಇಓ ಈಶ್ವರ್ ಕಾಂದೂ ಅವರು ಮಾತನಾಡಿ, ಉಪಖನಿಜ ಸಾಗಣೆ ವಾಹನಗಳಿಗೆ ಜಿಪಿಎಸ್ ಅಳವಡಿಸುವುದು ಕಡ್ಡಾಯವಾಗಿರುತ್ತದೆ. ಜಿಲ್ಲೆಯಲ್ಲಿ ಹಲವಾರು ವಾಹನಗಳಿಗೆ ಪರವಾನಿಗೆ ಇಲ್ಲದೇ, ನಂಬರ್ ಪ್ಲೇಟ್ ಇಲ್ಲದೇ ಹಾಗೂ ಜಿಪಿಎಸ್ ನೋಂದಣಿ ಇಲ್ಲದೇ ಅನಧೀಕೃತವಾಗಿ ಉಪ ಖನಿಜ ಸಾಗಣೆ ಮಾಡುವ ಬಗ್ಗೆ ದೂರುಗಳನ್ನು ದಾಖಲಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಡಾ.ಹಂಪಣ್ಣ ಸಜ್ಜನ, ದೇವದುರ್ಗ, ಲಿಂಗಸೂರು, ಅರಕೇರಾ, ಸಿರವಾರ, ಮಸ್ಕಿ, ಸಿಂಧನೂರ ಮತ್ತು ಮಾನ್ವಿ ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು. ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಾದ ಮುತ್ತಣ್ಣ ಅವರು ಸಭೆಗೆ ಇಲಾಖೆಯ ಗುರಿ ಸಾಧನೆಗಳ ಬಗ್ಗೆ ಮಾಹಿತಿ ನೀಡಿದರು.

## ಸಿರವಾರ: ರಸ್ತೆಯಲ್ಲಿ ಬಿಡಾಡಿ ದನ ಬಿಟ್ಟರೆ ದಂಡ! ಪಟ್ಟಣ ಪಂಚಾಯತಿಯಿಂದ ವಾಹನದ ಮೂಲಕ ಕಟ್ಟುನಿಟ್ಟಿನ ಎಚ್ಚರಿಕೆ

"ಸಿರವಾರ ಪಟ್ಟಣವನ್ನು ಸುಂದರ ಮತ್ತು ಸುರಕ್ಷಿತವಾಗಿಡುವುದು ನಮ್ಮೆಲ್ಲರ ಜವಾಬ್ದಾರಿ. ಜಾನುವಾರು ಮಾಲಕರು ಕೂಡಲೇ ತಮ್ಮ ದನಗಳನ್ನು ಕೊಟ್ಟಿಗೆಗಳಲ್ಲಿ ಕಟ್ಟಿ ಹಾಕಬೇಕು. ತಪ್ಪಿದಲ್ಲಿ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು."

ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್ ಸಿರವಾರ.

ಸಾರ್ವಜನಿಕರ ಗಮನಕ್ಕೆ: ಪಟ್ಟಣದ ಸ್ವಚ್ಛತೆ ಮತ್ತು ಸುಗಮ ಸಂಚಾರಕ್ಕೆ ಸಾರ್ವಜನಿಕರು ಹಾಗೂ ಜಾನುವಾರು ಮಾಲಕರು ಪಟ್ಟಣ ಪಂಚಾಯತ್ ಜೊತೆ ಸಹಕರಿಸಬೇಕೆಂದು ಈ ಮೂಲಕ ಕೋರಲಾಗಿದೆ.

## ಸಾರ್ವಜನಿಕರಿಗೆ ರಸ್ತೆ ಸುರಕ್ಷತೆ ಜಾಗೃತಿ ಅಗತ್ಯ: ನ್ಯಾ.ಮಾರುತಿ ಬಾಗಡೆ

ಹೆಲ್ಮೆಟ್ ಧರಿಸಿದೇ ವಾಹನ ಚಾಲನೆ ಮಾಡಿದಲ್ಲಿ ತಮ್ಮ ಜೀವನದ ಜೊತೆಗೆ ಕುಟುಂಬವನ್ನು ಅನಾಹುತಗಳಿಗೆ ತಳ್ಳಿದಂತಾಗುತ್ತದೆ ಎನ್ನುವ ತಿಳಿವಳಿಕೆ ಹೊಂದಬೇಕು ಎಂದರು.

ಈ ವೇಳೆ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ ಮಾತನಾಡಿ, ಬಿಸಿಲಿನ ಕಾರಣಕ್ಕೆ ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡುವ ಜನರು ಒಂದು ಅಂಶವನ್ನು ತಿಳಿದುಕೊಳ್ಳಬೇಕು. ಜೀವಕ್ಕಿಂತ ಬಿಸಿಲು ಅಷ್ಟೇನು ಮುಖ್ಯವಲ್ಲ. ಹೆಲ್ಮೆಟ್ ಧರಿಸುವ ಮೂಲಕ ಜೀವ ರಕ್ಷಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಗೌರವಾನ್ವಿತ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಡಿ.ಮಹಾವರಕರ್, 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹತ್ತಿಕಾಳ್ ಪ್ರಭು ಸಿದ್ದಪ್ಪ, ಪ್ರಧಾನ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸಿದ್ದರಾಮಪ್ಪ ಕಲ್ಯಾಣರಾವ್, ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಸುಧೀನ್ ಕುಮಾರ್ ಡಿ.ಜೆ., 2ನೇ ಹೆಚ್ಚುವರಿ ಹಿರಿಯ ಶ್ರೇಣಿ ವ್ಯವಹಾರ ನ್ಯಾಯಾಧೀಶರಾದ ಶ್ರೀಮತಿ ಶ್ವೇತಾ ಸಿಂಗ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, 3ನೇ ಅಪರ ಹಿರಿಯ ವ್ಯವಹಾರ ನ್ಯಾಯಾಧೀಶರಾದ ಶ್ರೀಮತಿ ಕೃಪಾ ಸಿ.ಎಲ್., ಪ್ರಧಾನ ವ್ಯವಹಾರ ನ್ಯಾಯಾಧೀಶರಾದ ಚನ್ನಬಸಪ್ಪ ಆರ್.ಕೂಡಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಜಿಲ್ಲಾ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳಾದ ಗುರುನಾಥ ರೆಡ್ಡಿ, ವಕೀಲರಾದ ಶಿವಶಂಕರ್, ಕೃಷ್ಣ ತುಂಗೆ ರೋಟರಿ ಕ್ಲಬ್‌ನ ಸದಸ್ಯರಾದ ಸಂಪತ್ತು ಕುಮಾರ್, ತಿರುಮಲ್ಲ ರೆಡ್ಡಿ, ಕೇಶರಾವ್ ಸೇರಿದಂತೆ ಇತರರು ಇದ್ದರು.

## ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆ ಸಿದ್ಧ

ಯುವಮಾರ್ಗ ಸುದ್ದಿ



**ರಾಯಚೂರು ಜ,30–** ರಾಯಚೂರು ಜಿಲ್ಲೆಯಲ್ಲಿ 2026ರ ಫೆಬ್ರವರಿ 05, 06 ಮತ್ತು 07 ರಂದು ಮೂರು ದಿನಗಳ ಕಾಲ ಹಮ್ಮಿಕೊಂಡ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ಜ್ಯೋತಿ ರಥಯಾತ್ರೆಯು ಸಿದ್ಧವಾಗಿದೆ.

ಈ ಜ್ಯೋತಿ ರಥಯಾತ್ರೆಯು ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಕವಿತಾಳ, ದೇವದುರ್ಗ, ಗಬ್ಬೂರ, ಅರಕೇರಾ, ಸಿರವಾರ ಸೇರಿದಂತೆ ರಾಯಚೂರು ಜಿಲ್ಲೆಯಾದ್ಯಂತ ಸಂಚರಿಸಲಿದೆ. ರಾಯಚೂರು ಉತ್ಸವದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ನಾನಾ ಕಾರ್ಯಕ್ರಮಗಳ ಮಾಹಿತಿಯನ್ನು ಜನತೆಗೆ ಒದಗಿಸುವ ದಿಶೆಯಲ್ಲಿ ಈ ಜ್ಯೋತಿ ರಥಯಾತ್ರೆ ಸಂಚರಿಸಲಿದೆ.

ಜಿಲ್ಲಾಧಿಕಾರಿಗಳ ಮನವಿ: ಈ ಜ್ಯೋತಿ ರಥಯಾತ್ರೆಯು ಫೆ.01ರ ಬೆಳಿಗ್ಗೆ 10 ಗಂಟೆಗೆ ರಾಯಚೂರು ನಗರದ ಕರ್ನಾಟಕ ಸಂಘದಿಂದ ಪ್ರಾರಂಭವಾಗಲಿದ್ದು, ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆ ಸಿಬ್ಬಂದಿಯೊಂದಿಗೆ ತಪ್ಪದೇ ಹಾಜರಾಗಬೇಕು. ಶಾಲಾ–ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮನವಿ ಮಾಡಿದ್ದಾರೆ.

## ರಾಯಚೂರು ಉತ್ಸವದ ಕರಪತ್ರಗಳನ್ನು ಮನೆಮನೆಗೆ ತಲುಪಿಸಿ ಪ್ರಚಾರ ನೀಡಲು ಡಿಹೆಚ್ಓ ಡಾ.ಸುರೇಂದ್ರ ಬಾಬು ಸೂಚನೆ



ಯುವಮಾರ್ಗ ಸುದ್ದಿ

**ರಾಯಚೂರು ಜ,30–** ಜಿಲ್ಲೆಯಲ್ಲಿ ಫೆ.05 ರಿಂದ ಫೆ.07ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರ ನಡೆಸಬೇಕಿದೆ. ಈ ಕಾರ್ಯಕ್ರಮದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ದಿಶೆಯಲ್ಲಿ ಆರೋಗ್ಯ ಇಲಾಖೆಯ ಕ್ಷೇತ್ರ ಸಿಬ್ಬಂದಿಯು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಮನೆಮನೆಗೆ ತೆರಳಿ ಉತ್ಸವದ ಕರಪತ್ರ ನೀಡಿ ಮಾಹಿತಿ ನೀಡುವಂತೆ ಉತ್ಸವದ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಯ ಸಮನ್ವಯಾಧಿಕಾರಿ ಆಗಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ಹೇಳಿದರು.

ಜನವರಿ 29ರ ಗುರುವಾರ ನಗರ ಡಿಹೆಚ್‌ಓ ಕಚೇರಿಯಲ್ಲಿ ಜಿಲ್ಲೆಯ ತಾಲೂಕು ಆರೋಗ್ಯಾಧಿಕಾರಿಗಳು ಹಗೂ ವೈದ್ಯಾಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐತಿಹಾಸಿಕ ನಾಡು ರಾಯಚೂರಿನಲ್ಲಿ ಬಹುದಿನಗಳ ನಂತರ ಜರುಗುತ್ತಿರುವ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಕಾರ್ಯಕ್ರಮವು ಮೂರು ದಿನಗಳ ಕಾಲ ನಡೆಯಲಿದ್ದು, ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು ಮೇಲಿಂದ ಮೇಲೆ ಸಭೆ ನಡೆಸಿ ಸಿದ್ಧತೆಗೆ ಸೂಚನೆ ನೀಡಿದ್ದಾರೆ. ಜನರ ಉತ್ಸವವನ್ನು ಇಮ್ಮಡಿಗೊಳಿಸುವ ದಿಶೆಯಲ್ಲಿ ಹಮ್ಮಿಕೊಂಡ ಎಲ್ಲ ಕಾರ್ಯಕ್ರಮಗಳಲ್ಲಿ ಜನರು ತಪ್ಪದೇ ಭಾಗಿಯಾಗಬೇಕು. ಈ ದಿಶೆಯಲ್ಲಿ ಜಿಲ್ಲೆಯ ಪ್ರತಿಯೊಂದು ಗ್ರಾಮಗಳಲ್ಲಿ ಪ್ರಚಾರ ಕಾರ್ಯವನ್ನು ಅಚ್ಚುಕಟ್ಟಾಗಿ ನಡೆಸಲು ಸೂಚನೆ ನೀಡಿದರು.

ಜನತೆಗೆ ಪ್ರೇರೇಪಣೆಗಾಗಿ ಈಗಾಗಲೇ ದೇಸಿ ಕ್ರೀಡೆ, ಮ್ಯಾರಾಥಾನ್, ಸೈಕ್ಲಿಂಗ್, ದೇಹದಾರ್ಢ್ಯ ಸ್ಪರ್ಧೆಗಳನ್ನು ಏರ್ಪಡಿಸಿ ಉತ್ಸವದ ಕಳೆ ಹೆಚ್ಚಿಸಲಾಗಿದೆ. ಅದರಂತೆ ಇನ್ನುಂದೆಯು ಸಹ ಬೇರೆ ಬೇರೆ ಕಾರ್ಯಕ್ರಮಗಳಿವೆ. ಮಕ್ಕಳ ಉತ್ಸವ, ಆಹಾರ ಮೇಳ, ಗ್ಯಾರಂಟಿ ಮೇಳ, ಹೆಲಿಕ್ಯಾಪ್ಟರ್ ಮೂಲಕ ರಾಯಚೂರು ಹಾಗೂ ಸುತ್ತಲಿನ ಸ್ಥಳ ವೀಕ್ಷಣೆ, ಹೆಸರಾಂತ ಕಲಾವಿದರು, ನೃತ್ಯಪಟುಗಳಿಂದ ಪ್ರತಿದಿನ ಕೃಷಿ ವಿಶ್ವವಿದ್ಯಾಲಯದ ಆವರಣ, ಜಿಲ್ಲಾ ರಂಗಮಂದಿರ, ಮಹಿಳಾ ಸಮಾಜದ ಗ್ರೌಂಡ್, ವಾಲ್ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತವೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದೀತಾ ಎಮ್.ಎನ್., ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್ ಕೆ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ತಾಲೂಕು ಆರೋಗ್ಯಾಧಿಕಾರಿ ಡಾ.ಅಮೃತ್ ಹಕ್ಕೇರಿ, ಡಿಹೆಚ್‌ಇಓ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಡಿಪಿಎಮ್ ನವೀನ್ ಕುಮಾರ್, ಹೆಚ್‌ಐಓ ಸುರೇಶ್, ನಾಗರಾಜ್, ಜ್ಯೋತಿ, ಭಾರತಿ ಸೇರಿದಂತೆ ಇತರರು ಇದ್ದರು.

ಆರೋಗ್ಯ ಇಲಾಖೆಯಿಂದ ಕಾರ್ಯಕ್ರಮ: ಜಾಲಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಿಗೆ ರಾಯಚೂರು ಉತ್ಸವದ ಕುರಿತು ಮಾಹಿತಿ ನೀಡಲಾಯಿತು.

### ಶ್ರೀ ಗಾಯತ್ರಿ ದೇವಿ ಶಾಲೆ ಮಕ್ಕಳ ಸಂತೆ

## ಮಕ್ಕಳಿಗೆ ಶಿಕ್ಷಣ ಜೊತೆಗೆ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿ– ಬಾಬು

ಯುವಮಾರ್ಗ ಸುದ್ದಿ




**ದೇವದುರ್ಗ,ಜ.30–** ಶಾಲಾ ಮಕ್ಕಳ ಸಂತೆ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಮಕ್ಕಳಲ್ಲಿ ವ್ಯಾಪಾರ ಜ್ಞಾನ, ಸೃಜನಶೀಲತೆ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವುದಾಗಿತ್ತು. ದೇವದುರ್ಗ ಗಾಯತ್ರಿ ಶಾಲಾ ಮಕ್ಕಳ ಸಂತೆ ಮುಖ್ಯ ಅತಿಥಿ ಯಾದ ಸಿ ಆರ್ ಪಿ ಬಾಬು ಅಭಿವ್ಯಕ್ತ ಪಡಿದ್ದರು

ಸಂತೆಯಲ್ಲಿ ವಿವಿಧ ತರಗತಿಯ ಮಕ್ಕಳು ತಮ್ಮದೇ ಕೈಚಳಕದಿಂದ ತಯಾರಿಸಿದ ವಸ್ತುಗಳನ್ನು ಮಾರಾಟಕ್ಕೆ ಇಟ್ಟಿದ್ದರು. ಕೈತಯಾರಿತ ಕೈಗಾರಿಕೆ ವಸ್ತುಗಳು, ಚಿತ್ರಗಳು, ಹೂವಿನ ಅಲಂಕಾರ, ಆಟಿಕೆಗಳು, ಪುಸ್ತಕ ಗುರುತುಗಳು, ಸಿಹಿತಿನಿಸುಗಳು ಹಾಗೂ ಆರೋಗ್ಯಕರ ಆಹಾರ ಪದಾರ್ಥಗಳು ಸಂತೆಯ ಪ್ರಮುಖ ಆಕರ್ಷಣೆ ಯಾಗಿದ್ದವು.ಮಕ್ಕಳು ಗ್ರಾಹಕರನ್ನು ಆಕರ್ಷಿಸಲು ತಮ್ಮ ವಸ್ತುಗಳ ಬಗ್ಗೆ ವಿವರವಾಗಿ ವಿವರಿಸಿ, ಬೆಲೆ ನಿಗದಿ ಮಾಡಿ ಮಾರಾಟ ಮಾಡಿದರು. ಇದರಿಂದ ಅವರಿಗೆ ಹಣಕಾಸಿನ ಜ್ಞಾನ, ಸಂವಹನ ಕೌಶಲ್ಯ ಹಾಗೂ ತಂಡದ ಕೆಲಸದ ಮಹತ್ವ ತಿಳಿಯಿತು. ಶಿಕ್ಷಕರು ಹಾಗೂ ಪೋಷಕರು ಸಂತೆಗೆ ಭೇಟಿ ನೀಡಿ ಮಕ್ಕಳನ್ನು ಉತ್ತೇಜಿಸಿದರು. ಈ ಕಾರ್ಯಕ್ರಮದಿಂದ ಮಕ್ಕಳು ಕಲಿಕೆಯ ಜೊತೆಗೆ ಪ್ರಾಯೋಗಿಕ ಅನುಭವವನ್ನು ಪಡೆದುಕೊಂಡರು. ಶಾಲಾ ಮಕ್ಕಳ ಸಂತೆ ಎಲ್ಲರಿಗೂ ಸಂತೋಷ, ಕಲಿಕೆ ಮತ್ತು ಸ್ಮರಣೀಯ ಅನುಭವವಾ ಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಸಿದ್ದನಗೌಡ ಪೋ ಪಾ ಮುಖ್ಯಗುರುಗಳಾದ ಶ್ರೀ ವೆಂಕಟೇಶ ನಾಯಕ ಚಿಂತಲಕುಂಟ. ಅತಿಥಿಗಳಾಗಿ ಲಾಲ್ ಸಾಬ್ ಶಾಲೆಯಶಿಕ್ಷಕರಾದ ಶ್ರೀ ಶಿವಾಜಿ ನಾಯಕ, ಶ್ರೀ ಶಿವಕುಮಾರಮಂಜುನಾಥ ,ಲಕ್ಷ್ಮೀ , ಶಿವಮ್ಮ , ಪವಿತ್ರ,ಅಮೀನ ಬೇಗಂ, ಹೀನ ಬೇಗಂ ಮಕ್ಕಳ ಪೋಷಕರಾದ– ಬಾಷಮಿಯಾ, ಆಶೀಯಾ ಅಬ್ದುಲ್ ಜಲಾಲ್, ಶಾಂತಮ್ಮ ಮೌನೇಶ, ಅಂಜಿನಮ್ಮ ಮಲ್ಲೇಶ ಅನೇಕ ಪಾಲಕರು ಪೋಷಕರು ಭಾಗವಹಿಸಿದರು

## ಶ್ರೀ ಜಗದ್ಗುರು ಮೌನೇಶ್ವರ 40 ನೇ ವರ್ಷದ ವೈಭವದ ಜಾತ್ರಾ ಮಹೋತ್ಸವ

ಯುವಮಾರ್ಗ ಸುದ್ದಿ



**ಮಾನ್ವಿ,ರಿ.30–**ತಾಲೂಕಿನ ಉಮಳಿ ಹೋಸುರು ಗ್ರಾಮದಲ್ಲಿನ ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನದಲ್ಲಿ 40 ನೇ ವರ್ಷದ ಜಾತ್ರಾ ಮಹೋತ್ಸವ ಅಂಗವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪುರವಂತರ ಸೇವೆ , ಪಲ್ಲಕ್ಕಿ ಉತ್ಸಾವ ನಡೆಯಿತು, ಗ್ರಾಮಸ್ಥರು ಕಾತರಿಕಿ ಮೌನೇಶ್ವರ ಮಠದ ಶ್ರೀ ಅಯ್ಯಪ್ಪ ತಾತನವರ ಸಾನಿಧ್ಯದಲ್ಲಿ ಶ್ರೀ ಜಗದ್ಗುರು ಮೌನೇಶ್ವರ ಉಚ್ಚಾಯ ಮಹೋತ್ಸವವನ್ನು ವೈಭವದಿಂದ ಭಕ್ತಿ ಭಾವದಿಂದ ನೆರವೇರಿಸಿದರು.

ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಗ್ರಾಮೀಣ ಭಾಗದ ರೈತರ ದೇಸಿ ಕ್ರೀಡೆಯಾದ ಗಿರ್ಕಿ ಬಂಡಿ ಓಟದ ಸ್ಪರ್ಧೆ ಹಾಗೂ ಕಬ್ಬಡಿ ಪಂದ್ಯಾವಳಿಗಳಿಗೆ ಸುವರ್ಣಗಿರಿ ಅಡವಿ ಅಮರೇಶ್ವರ ಮಠದ ಶ್ರೀ ತೋಂಟದಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಆಶೀರ್ವಾಚನ ನೀಡಿ ಇಂದಿನ ದಿನಗಳಲ್ಲಿ ರೈತರ ಅವಿಭಾಜ್ಯ ಅಂಗವೆಂದೆ ಪರಗಣಿಸಲಾಗುವ ಎತ್ತುಗಳೊಂದಿಗೆ ರೈತರು ಗೀರ್ಕಿ ಬಂಡಿ ಓಟದಲ್ಲಿ ಭಾಗವಹಿಸುವ ಮೂಲಕ ನಮ್ಮ ಅಪ್ಪಟ ಗ್ರಾಮೀಣ ಕ್ರೀಡೆಯನ್ನು ಮುಂದಿನ ಪಿಳಿಗೆಗೆ ಉಳಿಸಿ ಬೆಳೆಸುವ ಕಾರ್ಯವನ್ನು ಮಾಡುತ್ತಿದ್ದಾರೆ ಇಂತಹ ಗ್ರಾಮೀಣ ಕ್ರೀಡೆಗಳನ್ನು ಹೆಚ್ಚು ಹೆಚ್ಚು ನಡೆಸುವ ಮೂಲಕ ಅವುಗಳನ್ನು ಉಳಿಸಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಗೀರ್ಕಿ ಬಂಡಿ ಓಟದ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ರೈತ ಅರುಣ್ ಕುಮಾರ್ ನವಲಕಲ್ ರವರ ಎತ್ತುಗಳು ಪ್ರಥಮ ಸ್ಥಾನ ಪಡೆದು 20 ಸಾವಿರ, ರೈತ ಹನುಮೇಶ ಬೆಟ್ಟದೂರು ರವರ ಎತ್ತುಗಳು ದ್ವಿತೀಯ ಸ್ಥಾನ ಪಡೆದು10 ಸಾವಿರ , ರೈತ ಹನುಮಯ್ಯ ನೀರಮಾನವಿ ರವರ ಎತ್ತುಗಳು ತೃತೀಯ ಸ್ಥಾನ ಪಡೆದು ಆರು ಸಾವಿರ, ಬಹುಮಾನ 6ಸಾವಿರ ರೂ. ರೈತ ದದ್ದಲ್ ಸಣ್ಣ ವಿರೇಶ್ ರವರ ಎತ್ತುಗಳು ನಾಲ್ಕನೇ ಸ್ಥಾನ ಪಡೆಯುವ ಮೂಲಕ 4 ಸಾವಿರ ನಗದು ಬಹುಮಾನಗಳನ್ನು ಪಡೆದುಕೊಂಡರು. ಬಹುಮಾನಗಳನ್ನು ಪಂಪಣ್ಣ ಮ್ಯಾಕ್ಕಲ್, ಶರಣಪ್ಪ ಗೌಡ ಮಾಲಿ ಪಾಟೀಲ್ , ಮಹೇಂದ್ರ ನಾಯಕ್ ಮ್ಯಾಕಲ್ ,ಶಶಿಕುಮಾರ್ ಹೀರೆಮಠ ವಿತರಿಸಿದರು. ಗ್ರಾಮದ ಶ್ರೀ ಸಿದ್ದೇಶ್ವರ ದೇವಸ್ಥಾನದ ಜಮೀನಿನಲ್ಲಿ ನಡೆದ ಓಪನ್ ಮ್ಯಾಟ್ ಕಬ್ಬಡಿ ಪಂದ್ಯಾವಳಿಯಲ್ಲಿ ಬಾಗಲವಾಡ ತಂಡ ಪ್ರಥಮ. ಉಮಳಿಹೊಸುರು ತಂಡ ದ್ವಿತಿಯ, ಕೊರವಿ ತಂಡ ತೃತೀಯ ಸ್ಥಾನವನ್ನು ಪಡೆದುಕೊಂಡರು. ಕಬ್ಬಡಿ ಪಂದ್ಯಾವಳಿಯಲ್ಲಿ ವಿಜೇತರಾದ ತಂಡಗಳಿಗೆ ಶರಣಪ್ಪ ಗೌಡ ಮಾಲಿ ಪಾಟೀಲ್ ,ಲಚ್ಚುಮಯ್ಯ ನಾಯಕ ಗೊಬ್ಬರಕಲ್,ಅಂಬಣ್ಣ ನಾಯಕ ಬೇನೂರು ಬಹುಮಾನಗಳನ್ನು ವಿತರಿಸಿದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಗೀರ್ಕಿ ಬಂಡಿ ಓಟದ ಸ್ಪರ್ಧೆ ಹಾಗೂ ಕಬ್ಬಡಿ ಪಂದ್ಯಾವಳಿಗಳನ್ನು ವಿಕ್ಷೀಸುವುದಕ್ಕಾಗಿ ಉಮಳಿ ಹೋಸುರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು,ಗ್ರಾಮಸ್ಥರು ಆಗಮಿಸಿದರು.

ಯುವ ಮಾರ್ಗ



# ಗೃಹಲಕ್ಷ್ಮಿ ಯೋಜನೆಯ ಹಣ ಫಲಾನುಭವಿಗಳಿಗೆ ಸಮರ್ಪಕವಾಗಿ ಬಿಡುಗಡೆಯಾಗಬೇಕು:ಚಂದ್ರಿಕಾ ಪರಮೇಶ್ವರಿ

**ಕಲಬುರಗಿ:ಜ.30–** ಗೃಹ ಲಕ್ಷ್ಮಿ ಯೋಜನೆಯು ಮಹಾತ್ವಾಂಕ್ಷಿಯ ಯೋಜನೆಯಾಗಿದ್ದು, ಅಧಿಕಾರಿಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ಹಣವನ್ನು ಬಿಡುಗಡೆ ಮಾಡಬೇಕೆಂದು ಗ್ಯಾರೆಂಟಿ ಯೋಜನೆಗಳ ಅನುಷಾ??ನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷಿ ಚಂದ್ರಿಕಾ ಪರಮೇಶ್ವರಿ ಅವರು ಸೂಚನೆ ನೀಡಿದರು.

ಗುರುವಾರದಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಈಗಾಗಲೇ ಕೆಲವೊಂದು ದೂರುಗಳು ಬಂದಿವೆ ಫಲಾನುಭವಿಗಳಿಗೆ ಸರಿಯಾಗಿ ಹಣವನ್ನು ಬಿಡುಗಡೆಯಾಗುತ್ತಿಲ್ಲ ಇದರ ಬಗ್ಗೆ ಸಮಗ್ರ ಮಾಹಿತಿಯನ್ನು ನೀಡಲು ಸೂಚಿಸಿದ್ದಾಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಮಾತನಾಡಿ, ಆಧಾರಕಾರ್ಡ, ರೇಷನ್ ಕಾರ್ಡ, ಹೆಸರುಗಳು ವಿಳಾಸಗಳನ್ನು ತಪ್ಪಾಗಿರುವುದರಿಂದ ಬಾಕಿ ಉಳಿದಿರುತ್ತವೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಸಿ.ಇ.ಓ. ಭಂವರ ಸಿಂಗ್ ಮೀನಾ ಮಾತನಾಡಿ, ಅಫಜಲಪೂರ ಮತ್ತು ಕಲಬುರಗಿ ಹೆಚ್ಚಿನ ಮಾಹಿತಿಯನ್ನು ನೀಡಬೇಕು. 10 ದಿನಗಳ ಕ್ಯಾಂಪ್ ಮಾಡಬೇಕು ಕಂಟ್ರೋಲ್ ರೂಮ್ ಸ್ಥಾಪಿಸಬೇಕು. ಸಂಬಥಪಟ್ಟ ದಾಖಲೆಗಳ ಫಲಾನುಭವಿಗಳಿಗೆ ಪಡೆದು ಅವರಿಗೆ ಹಣಬಿಡುಗಡೆ ಮಾಡಲು ಕ್ರಮವಹಿಸಬೇಕು. ಅಧಿಕಾರಿಗಳಿಗೆ ಸೂಚಿಸಿದರು.

ಅನ್ನಭಾಗ್ಯ ಯೋಜನೆಯಡಿ ಏಪ್ರಿಲ್ 2024 ರಿಂದ 2025 ರ ಮಾಹೆಯ ಅಂತ್ಯೋದಯ ಅನ್ನ (ಎ.ಎ.ವೈ) ಹಾಗೂ ಆದ್ಯತಾ



(ಪಿ.ಹೆಚ್.ಹೆಚ್.) ಪಡಿತರ ಚೀಟಿಗಳ ಕುಟುಂಬ ಫಲಾನುವಿಭಗಳಿಗೆ ನೇರ ವರ್ಗಾವಣೆ ಡಿಬಿಟಿ ಮೂಲಕ ಒಟ್ಟು ರೂ 259, 69,14,589 ಹಣವನ್ನು ಪಾವತಿಸಲಾಗಿದೆ ಫೆಬ್ರುವರಿ 2025 ರ ಮಾಹೆಯ ಡಿಬಿಟಿ ಬದಲಾಗಿ ಎಎವೈ ಹಾಗೂ ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 5 ಕೆ.ಜಿ ವಿತರಿಸಲಾಗಿರುತ್ತದೆ ಜಿಲ್ಲಾ ನಗರ ಅಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನ್ನವರ ದೌಲ ಸಭೆಯ ಗಮನಕ್ಕೆ ತಂದರು. ಜಿ.ಪಂ. ಸದಸ್ಯರುಗಳು ಮಾತನಾಡಿ, ಆಹಾರ ಧಾನ್ಯಗಳು ಸರಿಯಾಗಿ ವಿತರಣೆಯಾಗುತ್ತಿಲ್ಲ ಪಡಿತರ ಅಂಗಡಿ ಎರಡು ಮೂರು ದಿನಗಳ ಮಾತ್ರ ತೆಗೆಯುತ್ತಾರೆ. ಬಡಕುಟುಂಬ ಜನರಿಗೆ ಸರಿಯಾಗಿ ವಿತರಣೆ ಆಗುವುದಿಲ್ಲ ತಿಂಗಳಿಗೆ 15 ದಿನಗಳವರೆಗೆ ದುಖಾನ ತೆಗೆಯಬೇಕೆಂದು ಸಭೆಯ ಗಮನಕ್ಕೆ ತಂದರು ಅಧ್ಯಕ್ಷರು ಪ್ರತಿಕ್ರಿಯಿಸಿ ಅವರ ಸೂಕ್ತ ಕ್ರಮ ಜರುಗಿಸಬೇಕು. ಜಿಲ್ಲೆಯಲ್ಲಿನ ಪಡಿತರ ಚೀಟಿಗಳ ಮಾಹಿತಿ ಪಡೆದರು.

ಶಕ್ತಿಯೋಜನೆಯಡಿ ವಿಭಾಗೀಯ ನಿಯಂತ್ರಣಾಧಿಕಾರಿ ಕರ್ನಾಟ ರಾಜ್ಯ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ-1 ಮತ್ತು 2 ಒಟ್ಟು ಇಲ್ಲಿಯವರೆಗೆ 1803.05 ಲಕ್ಷಗಳಲ್ಲಿ ಪ್ರಯಾಣಿಸಿದ್ದಾರೆ ಎಂದರು. ಪ್ರಯಾಣಿಕರಿಗೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಕೆಲವೊಂದು ಸಮಸ್ಯೆಗಳಿದ್ದಲ್ಲಿ ಹೆಚ್ಚುವರಿ ಬಸ್‌ಗಳನ್ನು ನೀಡಲಾಗಿದೆ ಎಂದರು. ಜಿಲ್ಲಾಪಂಚಾಯತ್ ಸದಸ್ಯರುಗಳು ಮಾತನಾಡಿ, ನಾಗನಳ್ಳಿರಸ್ತೆಯಿಂದ ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜ್, ಮತ್ತು ಇನ್ನಿತರ ಶಾಲಾ ಕಾಲೇ???ಗಳಿಗೆ ಹೋಗಲು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದರು.

ಯುವನಿಧಿ ಯೋಜನೆಯಡಿ ಜಿಲ್ಲೆಯಲ್ಲಿ ಡಿಸೆಂಬರ್ 23 ರಿಂದ ಸೆಪ್ಟೆಂಬರ್ 2025 ರ ಅಂತ್ಯದವರೆ ಪದವಿಧರರು ಮತ್ತು ಡಿಪ್ಲೊ???ವಾ ಪದವಿಧರರು ಒಟ್ಟು ಸೇರಿ 21,902 ನೋಂದಾಯಿಸಲಾಗಿದೆ ಇಲ್ಲಿಯವರೆಗೆ ಒಟ್ಟು ಹಣವನ್ನು ರೂ. 54,74,17,500 ವೆಚ್ಚ ಮಾಡಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಹಾಯಕ ನಿರ್ದೇಶಕರು ಭಾರತಿ ಅವರು ಸಭೆಯ ಗಮನಕ್ಕೆ ತಂದರು. ಜಿಲ್ಲಾ ಪಂಚಾಯತ್ .ಸಿ.ಇ.ಓ ಅವರು ಮಾತನಾಡಿ, ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಲು ಪೊ?ಸ್ಟರ್ ಬಿಡುಗಡೆ ಮಾಡಬೇಕು ನಂತರ ಡಿಪ್ಲೊ???ಮಾ ಮತ್ತು ಪದವಿಧರರಾ ಕಾಲೇಜುಗಳಲ್ಲಿ ಅಂಟಿಸಬೇಕು ಹೆಚ್ಚಿನ ಜಾಗೃತಿ ಕೆಲಸಗಳನ್ನು ಮಾಡಲು ಸೂಚಿಸಿದರು. ಗೃಹ ಜ್ಯೋತಿ ಮಾಹಿತಿ ಪಡೆದು ಸಲಹೆ ಸೂಚನೆಗಳನ್ನು ನೀಡಿದರು.

ಇದೇ ಸಂದರ್ಭದಲ್ಲಿ ಉಪಾಧ್ಯಕ್ಷರುಗಳಾದ ವಿಜಯಕುಮಾರ ಕಟ್ಟಿಮನಿ, ಸೋಮಶೇಕರ ಹಿರೇಮಠ, ನಿರ್ಮಲಾ ಬರ್ಗಲಿ, ನರಸಿಂಹಲು ಕುಂಬಾರ, ಸುರೇಶ ತಪ್ಪಶೆಟ್ಟಿ ಸೇರಿದಂತೆ ತಾಲೂಕು ಮಟ್ಟದ ಅಧ್ಯಕ್ಷರು ಹಾಗೂ ಸದಸ್ಯರು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಎಸ್.ಎಸ್. ಮಠಪತಿ, ಸೇರಿದಂತೆ ಅಧಿಕಾರಿಗಳು ಇದ್ದರು.

## ರಾಜ್ಯದಲ್ಲಿಯೇ ಕಸಾಪಗೆ ಹೆಚ್ಚು ದತ್ತಿ ನಿಧಿಯ ಖ್ಯಾತಿ ಬಳ್ಳಾರಿ ಜಿಲ್ಲೆಯದು: ಚೋರನೂರು ಕೊಟ್ರಪ್ಪ




**ಬಳ್ಳಾರಿ, ಜ.30–** ಕನ್ನಡ ಭಾಷೆಯ ಸಂರಕ್ಷಣೆ, ಅಭಿವೃದ್ಧಿ, ಸಾಹಿತ್ಯ, ವಿಮರ್ಶೆ ಮೊದಲಾದ ಆಧ್ಯತೆಗಳೊಂದಿಗೆ ಸ್ಥಾಪನೆಗೊಂಡ ಕನ್ನಡ ಸಾಹಿತ್ಯ ಪರಿಷತ್ ನಿಂದ ನಡೆಯುವ ಉಪನ್ಯಾಸಗಳಿಗೆ ಅತಿಹೆಚ್ಚು ದತ್ತಿ ನೀಡಿರುವ ಕೊಡುಗೆ ಬಳ್ಳಾರಿಯದು ಎಂದು ವೀರಶೈವ ವಿದ್ಯಾವರ್ಧಕ ಸಂಘದ ಮಾಜಿ ಕಾರ್ಯದರ್ಶಿ ಚೋರನೂರು ಟಿ.ಕೊಟ್ರಪ್ಪ ಹೇಳಿದರು.

ನಗರದ ಹೀರದ ಸೂಗಮ್ಮ ಶಾಲೆಯಲ್ಲಿ ಇಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ ಹಮ್ಮಿಕೊಂಡಿದ್ದ ಚೋರನೂರು ಡಾ.ಟಿ.ಕೆ.ಬಸವರಾಜಪ್ಪ, ಸಿರಿಗೇರಿ ಬಸವರಾಜ್, ಪಟೇಲ್ ಬಸವರಾಜ್, ಸ್ಮಾರಕ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.ಬೇರೆ ಭಾಷೆ ಕಲಿಯುವ ಅಗತ್ಯತೆ ಇದೆ. ಜೊತೆಗೆ ಕನ್ನಡದ ಬಗ್ಗೆ ಅಭಿಮಾನ ಇಟ್ಟು ಕೊಳ್ಳಬೇಕು. ಎಂದಿಗೂ ಕನ್ನಡವನ್ನು ಮರೆಯಬಾರದು. ನಮ್ಮ ನೋವು ನಲಿವು, ಕನಸು ಸಹ ಕನ್ನಡಲ್ಲಿದ್ದಾಗ ಅದು ನಿತ್ಯವಾಗಿರುತ್ತದೆಂದರು.

ಕಾರ್ಯಕ್ರಮ ಉದ್ಘಾಟನೆ ಮಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಎನ್.ವೀರಭದ್ರಗೌಡ ಅವರು "ನಾನೊಬ್ಬ ನಿದ್ರೆ ಮಾಡಿದರೆ ಅದು ನನ್ನಬ್ಬೊನ ಹಿತಕ್ಕೆ. ನಾನೊಬ್ಬ ಎಚ್ಚೆತ್ತು ದುಡಿದರೆ ಅದು ದೇಶಕ್ಕೆ ಹಿತ" ಎಂಬ ಮಾತಿನಂತೆ ಶಾಲಾ ಮಕ್ಕಳು ತಮ್ಮಜೀವನ ರೂಪಿಸಿಕೊಳ್ಳಬೇಕು.

ಅದಕ್ಕೆ ಮಕ್ಕಳು ರೀಲ್ಸ್ ನೋಡುವುದನ್ನು ಬಿಟ್ಟು, ನ್ಯೂಸ್ ನೋಡಿ. ಅದರಲ್ಲಿನ ಪ್ರಮುಖ ಘಟನಾವಳಿಗಳನ್ನು ನೋಟ್ ಮಾಡಿ ಮನನ ಮಾಡುತ್ತಿದ್ದರೆ ಅದು ಸ್ಪರ್ಧಾ ಪರೀಕ್ಷೆಗಳಿಗೆ ಸಹಕಾರಿಯಾಗುತ್ತೆ ಎಂದರು. ನೈತಿಕ ಶಿಕ್ಷಣದಲ್ಲಿ ಮಾತೃಭಾಷೆಯ ಮಹತ್ವ ಕುರಿತು ಉಪನ್ಯಾಸ ನೀಡಿದ. ನಿವೃತ್ತ ಮುಖ್ಯೋಪಾಧ್ಯಾಯ ಮೆಹತಾಬ್ ಅವರು, ನಮ್ಮದು ತ್ರಿಭಾಷಾ ಸೂತ್ರದ ದೇಶವಾದರೂ, ಆಂಗ್ಲ ಭಾಷೆಯಲ್ಲಿ ಭಾವನಗೆ ಹೆಚ್ಚು ಅವಕಾಶ ಇಲ್ಲ. ಆದರೆ ಮಾತೃಭಾಷೆ ಕನ್ನಡದಲ್ಲಿ ಭಾವನೆಗಳಿ ಶಬ್ದಗಳ ಬಂಡಾರವೇ ಇದೆ. ಮಾತೃಭಾಷೆ ಮನಕ್ಕೆ ಹತ್ತಿರವಾಗಿ ಗ್ರಹಿಕೆಗೆ ಸಹಕಾರಿಯಾಗಲಿದೆ. ಹಾಗಾಗಿ ನೈತಿಕತೆಯನ್ನು ನಮ್ಮಲ್ಲಿ ಅಳವಡಿಸಿಕೊಳ್ಳಲು ನಮ್ಮ ಭಾಷೆಯಲ್ಲಿ ಹೇಳಿದರೆ ಅದು ನಮಗೆ ಹೆಚ್ಚು ಹೆಚ್ಚು ಆಸಕ್ತಿದಾಯಕವಾಗಿರುತ್ತದೆ. ಮುಖ್ಯವಾಗಿ ನೈತಿಕ ಶಿಕ್ಷಣ ಮನೆಯಿಂದಲೇ ಪ್ರಾರಂಭವಾಗಬೇಕು ಎಂದರು.

ಕಸಾಪದ ಜಿಲ್ಲಾ ಅಧ್ಯಕ್ಷ ಡಾ.ನಿಷ್ಠಿ ರುದ್ರಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ದತ್ತಿ ಉಪನ್ಯಾಸದ ಕುರಿತು ವಿವರಿಸಿದರು.

ಶಾಲೆಯ ಆಡಳಿತ ಮಂಡಳಿಯ ಅಧ್ಯಕ್ಷ ಯಾಳ್ಪಿ ಮೇಟಿ ಪಂಪನಗೌಡ ಅಧ್ಯಕ್ಷತೆವಹಿಸಿದ್ದರು. ಆಡಳಿತ ಮಂಡಳಿಯ ಸದಸ್ಯ ಟೆಂಗಿನಕಾಯಿ ಮಂಜುನಾಥ. ಡಾ.ಬಸವರಾಜ್ ಗದಗಿನ, ಕಣೇಕಲ್ ಎರ್ರಿಸ್ವಾಮಿ, ಕಾಶಿನಾಥ, ಕಸಾಪ ನಗರ ಅಧ್ಯಕ್ಷ ಎರ್ರಿಸ್ವಾಮಿ, ಶಾಲೆಯ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಮುಖ್ಯ ಗುರು ಎಸ್.ಎಂ.ಶಿವಶರಣಯ್ಯ, ಶರಣ ಸಕ್ಕರೆ ಕರಡೀಶ ಶಾಲೆಯ ಮುಖ್ಯ ಗುರು ಖಾದರ್ ಬೀ ಶಾಲೆಯ ಮುಖ್ಯೋಪಾದ್ಯಾಯ ಅಕ್ಕಿ ಮರಿಸ್ವಾಮಿ ಸ್ವಾಗತ, ಶಿಕ್ಷಕಿ ಎಲ್.ಜಯಂತಿ ಕಾರ್ಯಕ್ರಮ ನಿರೂಪಿಸಿದರು.

## ವಿಬಿ ಜಿ ರಾಮ್ ಜಿ ಜಾರಿ- ಎ ಐ ಕೆ ಕೆ ಎಂ ಎಸ್ ಖಂಡನೆ




**ಬಳ್ಳಾರಿ, ಜ.30–** 'ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ (ಗ್ರಾಮೀಣ) ಮಸೂದೆ- 2025 (ವಿಬಿಜಿ ಆರ್ ಎ ಎಮ್ ಜಿ) ಕೂಡಲೇ ಹಿಂತೆಗೆದುಕೊಳ್ಳಬೇಕು ಎಂದು ಎ ಐ ಕೆ ಕೆ ಎಂ ಎಸ್ ರೈತ ಸಂಘಟನೆ ಸದಸ್ಯರು ಇಂದು ತಹಶೀಲ್ದಾರ್ ಮೂಲಕ ಪ್ರಾಧಾನಿಯವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ ಅವರು ಮಾತನಾಡುತ್ತಾ ಗ್ರಾಮೀಣ ಜನತೆಗೆ ಉದ್ಯೋಗ ಖಾತ್ರಿಪಡಿಸುವ ಉದ್ದೇಶದಿಂದ ತಂದಿದ್ದ ಎಂಜಿ ನರೇಗಾ ಕಾಯ್ದೆಯ ಬದಲಿಗೆ 'ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಆಜೀವಿಕಾ ಮಿಷನ್ (ಗ್ರಾಮೀಣ) ಮಸೂದೆ- 2025 ಅನ್ನು ಜಾರಿಗೊಳಿಸಲು ಪ್ರಯತ್ನಿಸುತ್ತಿರುವ ಕೇಂದ್ರ ಬಿಜೆಪಿ ಸರ್ಕಾರದ ಹೀನ ಪ್ರಯತ್ನವನ್ನು ನಾವು ಉಗ್ರವಾಗಿ ಖಂಡಿಸುತ್ತೇವೆ.

ಈ ಮಸೂದೆಯು ಎಂಜಿ ನರೇಗಾ ಕಾಯ್ದೆಯನ್ನು ಮತ್ತು ಅದರಲ್ಲಿದ್ದ ಉದ್ಯೋಗದ ಶಾಸನಬದ್ಧ ಖಾತ್ರಿಯನ್ನು ತೆಗೆದುಹಾಕುವ ಪ್ರಯತ್ನವಾಗಿದೆ. ಯೋಜನೆಯ ಕುರಿತು ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರಗಳ ಯಾವುದೇ ಪಾತ್ರವನ್ನು ನಿರಾಕರಿಸುತ್ತಾ, ಕೇಂದ್ರ ಸರ್ಕಾರಕ್ಕೆ ಸಂಪೂರ್ಣ ಅಧಿಕಾರ ನೀಡಿ, ಒಕ್ಕೂಟ ವ್ಯವಸ್ಥೆ ಅಡಿಪಾಯವನ್ನು ನಾಶಗೊಳಿಸುವ ಪ್ರಯತ್ನವಾಗಿದೆ. ಹಾಗೆಯೇ, ಕೇಂದ್ರ ಬಿಜೆಪಿ ಸರ್ಕಾರವು ತನ್ನ ಹಣಕಾಸಿನ ಜವಾಬ್ದಾರಿಯನ್ನು ಶೇ.60 ಕ್ಕೆ (ಹಿಂದೆ ಶೇ.100) ಇಳಿಸುವುದು ಮತ್ತು ಅದರ ಶೇ.40 ರಷ್ಟು ಹೊರೆಯನ್ನು ರಾಜ್ಯ ಸರ್ಕಾರಗಳಿಗೆ ವರ್ಗಾಯಿಸುವುದಾಗಿದೆ, ಹಾಗಾಗಿ ಇದನ್ನು ನಾವು ವಿರೋಧಿಸುತ್ತೇವೆ, ಜೊತೆಗೆ

ಜಾಬ್ ಕಾರ್ಡ್ಗಳನ್ನು ಸುಧಾರಣೆ ಮಾಡುವ ಘೋಷಣೆಯ ಮೂಲಕ ಗ್ರಾಮೀಣ ಜನರನ್ನು ಉದ್ಯೋಗದ ಹಕ್ಕಿನಿಂದ ವಂಚಿತರನ್ನಾಗಿ ಮಾಡುವುದು ಈ ಯೋಜನೆಯ ಭಾಗವಾಗಿದೆ.

ಈಗ ಗ್ರಾಮೀಣ ಬಡ ಜನತೆಗೆ ಹೆಚ್ಚು ಹೆಚ್ಚು ಉದ್ಯೋಗಗಳನ್ನು ಒದಗಿಸುವುದು ಈ ಘಳಿಗೆಯ ಅವಶ್ಯಕತೆ ಮತ್ತು ಈ ಕಾರ್ಯ ಕೇಂದ್ರ ಸರ್ಕಾರದ ಜವಾಬ್ದಾರಿ ಆಗಿರುವಾಗ, ಈ ಕೇಂದ್ರ ಬಿಜೆಪಿ ಸರ್ಕಾರ ಅದಕ್ಕೆ ಸಂಪೂರ್ಣವಾಗಿ ವಿರುದ್ಧ ಗತಿಯಲ್ಲಿ ನಡೆದಿದೆ.

ಈ ಪ್ರಸ್ತಾಪಿತ ಮಸೂದೆಯು ಗ್ರಾಮೀಣ ಬಡ ಜನತೆಯ ಬದುಕುವ ಹಕ್ಕಿನ ಮೇಲಿನ ದಾಳಿ ಆಗಿರುವುದರಿಂದ ಅದನ್ನು ತೀವ್ರವಾಗಿ ಖಂಡಿಸುತ್ತೇವೆ. ಹಾಗೆಯೇ ಪ್ರತಿ ಕುಟುಂಬಕ್ಕೆ 200 ದಿನ ಕೆಲಸ, 600 ರೂ ಕೂಲಿ ವಿತರಿಸಬೇಕು ಎಂದರು ಮತ್ತು ಕೇಂದ್ರ ಬಿಜೆಪಿ ಸರ್ಕಾರದ ಈ ಜನ ವಿರೋಧಿ, ಕಾರ್ಮಿಕ ವರ್ಗ ವಿರೋಧಿ ಪ್ರಯತ್ನವನ್ನು ಸೋಲಿಸಲು ಕೊನೆಯವರೆಗೂ ಹೋರಾಡಲು ಮುಂದೆ ಬರಬೇಕೆಂದು ದುಡಿಯುವ ಜನರಿಗೆ ಎ ಐ ಕೆ ಕೆ ಎಂ ಎಸ್ ನಾಯಕರು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಅನಿಲ್, ಗಣೇಶ್, ರಾಮಂಜಿನಿ, ರೈತರಾದ ಯಲ್ಲಮ್ಮ, ಹುಲಿಗೆಮ್ಮ, ಸುಬ್ಬಮ್ಮ, ಮಲ್ಲಯ್ಯ, ವಿರೇಶಪ್ಪ, ವಡ್ರ ಹುಲಿಗೆಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಳೆ ಮುದ್ದಾಪುರ ಗ್ರಾಮದಲ್ಲಿ ಕೆಪಿಎಸ್ ಮ್ಯಾಗ್ನೆಟ್ ಯೋಜನೆ ವಿರುದ್ಧ ಪ್ರತಿಭಟನೆ

**ಬಳ್ಳಾರಿ, ಜ.30–** ಎಐಡಿಎಸ್‌ಒ ನೇತೃತ್ವದಲ್ಲಿ ಸಂಡೂರು ತಾಲೂಕಿನ ಹಳೆ ಮಾದಾಪುರ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯಲ್ಲಿ ಗ್ರಾಮಸ್ಥರು, ಪಾಲಕರು ಹಾಗೂ ವಿದ್ಯಾರ್ಥಿಗಳು ಸೇರಿ ಇದೇ ನಮ್ಮ ಗ್ರಾಮದಲ್ಲಿ ಎಂಟನೇ ತರಗತಿವರೆಗೂ ಶಾಲೆ ಪ್ರಾರಂಭವಾಗಬೇಕು ಎಂದು ಬೇಡಿಕೆಯನ್ನು ಇಟ್ಟುಕೊಂಡು ಜೊತೆಗೆ ರಾಜ್ಯ ಸರ್ಕಾರದ ಕೆ ಪಿ ಎಸ್ ಮ್ಯಾಗ್ನೆಟ್ ಯೋಜನೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಐಡಿಎಸ್‌ಒ ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ ಮಾತನಾಡಿ, ರಾಜ್ಯ ಸರ್ಕಾರವು ಬಿಡುಗಡೆ ಮಾಡಿರುವ ಆದೇಶ ಗಳ ಪ್ರಕಾರ ರಾಜ್ಯಾದಂತ 5900 ಗ್ರಾಮ ಪಂಚಾಯಿತಿಗಳ ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳಾಗಿ ಪರಿವ ರ್ತಿಸಲು ಸರ್ಕಾರವು ನಿರ್ಧರಿಸಿದೆ. ಈ ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ಐದು ಕಿಲೋಮೀಟವ್ಯಾಪ್ತಿಯಲ್ಲಿ ಉಳಿದ ಸರ್ಕಾರಿ ಶಾಲೆಗಳನ್ನು ಕೊಲ್ಲುವ ಹುನ್ನಾರ ಇದಾಗಿದೆ ಎಂದರು.

ಈ ಕೂಡಲೇ ರಾಜ್ಯ ಸರ್ಕಾರ ಎಚ್ಚೆತ್ತು ಕೊಂಡು ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಅಡಿಯಲ್ಲಿ ಸರ್ಕಾರಿ ಶಾಲೆಗಳ ಮುಚ್ಚು




ವುದು ಕೈಬಿಡಬೇಕೆಂದು ಅವರು ಆಗ್ರಹಿಸಿ ದರು. ಪ್ರತಿಭಟನೆಯಲ್ಲಿ ಎಐಡಿಎಸ್‌ಒ ಜಿಲ್ಲಾ ಅಧ್ಯಕ್ಷರಾದ ಕೆ ಈರಣ್ಣ, ಜಿಲ್ಲಾ ಉಪಾಧ್ಯಕ್ಷರಾದ ಶಾಂತಿ, ಹಳ್ಳಿಯ ಗ್ರಾಮಸ್ಥರಾದ ಕೆ ಎಸ್ ವೆಂಕಟೇಶ್, ಸುನಿಲ್, ವೆಂಕಟೇಶ್, ಸೆಕ್ಷಾ ವಲಿ, ವೀರೇಶ್, ಪಾಲ್ಗೊಂಡಿದ್ದರು.

## ಧರ್ಮ ಕಾರ್ಯದಿಂದ ಜೀವನ ಶ್ರೇಷ್ಠ : ಸಚಿವ ಖಂಡ್ರೆ

**ಕಮಲನಗರ : ಜ.30–**ಧರ್ಮ ಕಾರ್ಯಗಳಿಂದಲೆ ರಾಜಕೀಯ ಜೀವನ ಶ್ರೇಷ್ಟ ಗುಣಮಟ್ಟದ ಶಿಕ್ಷಣಗಿಂತಲೂ ಸಂಸ್ಕಾರಯುತ ಶಿಕ್ಷಣ ಅತ್ಯವಶ್ಯಕ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ನುಡಿದರು.

ಪಟ್ಟಣದ ಈಶಾನ ಫಂಕ್ಷನ್ ಹಾಲ್‌ನಲ್ಲಿ ಅಭಿಮಾನಿ ಬಳಗ, ವೀರಶೈವ ಲಿಂಗಾಯತ ಸಮಾಜದಿಂದ ಹಮ್ಮಿಕೊಂಡ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿ, ಬಸವಕಲ್ಯಾಣದಲ್ಲಿ ನಿರ್ಮಾಣಗೊಳ್ಳುತ್ತಿರುವ ಪ್ರಜಾಪ್ರಭುತ್ವದ ಪ್ರಥಮ ಸಂಸತ್ತು ಶೀಘ್ರ ಲೋಕಾರ್ಪಣೆಗೊಳಿಸುವಂತೆ ಕಾರ್ಯ ಕೈಗೆತ್ತಿಕೊಂಡಿದ್ದು, ಜಗತ್ತು ಕಲ್ಯಾಣದ ಕಡೆಗೆ ಮುಖ ಮಾಡುವ ಸಮಯ ಶೀಘ್ರದಲ್ಲೇ ನೇರವೇರಲಿದೆ ಎಂದರು.

ಮುಖಂಡರಾದ ಪ್ರಕಾಶ ಟೊಣ್ಣೆ ಅವರು ಮಾತನಾಡಿ ಗಡಿ ಭಾಗದಿಂದ ಅಖಿಲ ಭಾರತ ವೀರಶೈವ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾಗಿ ದಕ್ಷ, ಸಂಸ್ಕಾರಯುತ ಶರಣ ಜೀವಿಗಳಿಗೆ ದೊರಕಿದ್ದು ಸಮಾಜಕ್ಕೆ ಎಲ್ಲಿಲ್ಲದ ಅಭಿಮಾನ ಮೂಡಿದೆ. ರಾಜಕೀಯ ಕಾರ್ಯದೊಂದಿಗೆ ಧರ್ಮ ಬೆಳೆಯುವಂತಾಗಲೆಂದರು.




ಈ ಸಂಧರ್ಭದಲ್ಲಿ ಸಮುದಾಯದ ಮುಖಂಡರಾದ ಸಂತೋಷ ಬಿರಾದಾರ್, ಪ್ರವೀಣ್ ಪಾಟೀಲ್, ಶಿವಕುಮಾರ ಬಿರಾದಾರ್, ಮದನೂರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪೂಜಾ ಗುಂಡಪ್ಪ ಬೇಲ್ಲೆ ಮದನೂರ ಮತ್ತು ಇತರರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.ಸಂತೋಷ, ಶಿವಣಕರ್ ಹಾಜರಿದ್ದರು. ಪ್ರಾಂಶುಪಾಲ ಶಿವಾಜಿ ನಿರೂಪಿಸಿದರು.

ಯುವ ಮಾರ್ಗ

www.yuvamarga.com Yuva Marga yuva_marga_

# ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಸರ್ವೋದಯ ದಿನ ಆಚರಣೆ

ಯುವಮಾರ್ಗ ಸುದ್ದಿ

**ಮಾನ್ವಿ,ಜ.30–** ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರು ಹುತಾತ್ಮರಾದ ದಿನವನ್ನು ಸರ್ವೋದಯ ದಿನ ರಾಷ್ಟ್ರೀಯ ಹುತಾತ್ಮರ ದಿನ ಎಂದು ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಆಚರಿಸಲಾಯಿತು. ಶಾಲಾ ಕಾರ್ಯದರ್ಶಿ ಸೈಯದ್ ಮುಜಾತಾಬ ಖಾದ್ರಿ, ಮುಖ್ಯ ಗುರು ನಾಗರತ್ನ ದೇಸಾಯಿ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು, ಸ್ಕೌಟ್ ಗೈಡ್ ವಿದ್ಯಾರ್ಥಿಗಳು ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕ ನರಸಿಂಹ ಮೂರ್ತಿ ದೇಸಾಯಿ ವಿದ್ಯಾರ್ಥಿಗಳಿಗೆ ಗಾಂಧೀಜಿಯವರ ಜೀವನ ಚರಿತ್ರೆ ತ್ಯಾಗ ಬಲಿದಾನಗಳ ಕುರಿತು ಮಾಹಿತಿ ನೀಡಿದರು. ಇಂದಿನ ವಿದ್ಯಾರ್ಥಿಗಳೇ ಭಾವಿ ಭಾರತದ ಪ್ರಜೆಗಳು, ಸದೃಢ ಭಾರತದ ನಿರ್ಮಾಣಕ್ಕಾಗಿ ವಿದ್ಯಾರ್ಥಿಗಳು ಶ್ರಮಿಸಬೇಕು ಹಾಗೂ ಎಲ್ಲರೂ ಸಹೋದರತೆಯಿಂದ ಇರಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಸರ್ವಧರ್ಮ ಪ್ರಾರ್ಥನೆ ಆಯೋಜಿಸಲಾಯಿತು.



# ಯರಮರಸ್ ಆದರ್ಶ ವಿದ್ಯಾಲಯದಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜ,30–** ತಾಲೂಕಿನ ಯರಮರಸಿನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026–27ನೇ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆಂದು ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಈರಣ್ಣ ಗೋಸಗಿ ಅವರು ತಿಳಿಸಿದ್ದಾರೆ.

ಪ್ರಸ್ತುತ 2025–26ನೇ ಸಾಲಿನಲ್ಲಿ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರು ಇದ್ದು, ಅರ್ಜಿಯನ್ನು ಫೆ.25ರೊಳಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ: www.schooleducation.karnataka.gov.in ಅಥವಾ www.vidyavahini.karnataka.gov.in ನಲ್ಲಿಉಚಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಅವಕಾಶವನ್ನು ಪಾಲಕರು ಇದರ ಸದುಪಯೋಗ ಪಡಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಸಹಾಯವಾಣಿ ಸಂಖ್ಯೆ: 9481087977ಗೆ ಸಂಪರ್ಕ ಮಾಡಬಹುದಾಗಿದೆ ರಾಯಚೂರಿನ ಕ್ಷೇತ್ರಾ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೇಪರ್ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆ ತರಬೇತಿ

**ರಾಯಚೂರು ಜ,30–** ಪೇಪರ್ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯನ್ನು ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಯಚೂರಿನ ಉಪ ನೋಂದಣಿ ಕಚೇರಿಯಲ್ಲಿ ಪೇಪರ್ಲೆಸ್ ರಿಜಿಸ್ಟ್ರೇಷನ್ ವ್ಯವಸ್ಥೆಯ ಕುರಿತು ತರಬೇತಿಯನ್ನು ಜನವರಿ 31ರ ಮಧ್ಯಾಹ್ನ 3 ಗಂಟೆಗೆ ಹಮಿಕೊಳ್ಳಲಾಗಿದ್ದು, ತರಬೇತಿಯ ಸದುಪಯೋಗವನ್ನು ಸಾರ್ವಜನಿಕರು ಪಡೆಯಬಹುದಾಗಿದೆ.

ಸಂಬಂಧಪಟ್ಟ ದಸ್ತಾವೇಜು ಬರಹಗಾರರು, ವಕೀಲರು, ಕರ್ನಾಟಕ ಒನ್, ರಾಯಚೂರು ಒನ್, ಗ್ರಾಮ ಒನ್, ಮತ್ತು ಬಾಪೂಜಿ ಸೇವಾ ಕೇಂದ್ರ ವರ್ಗದವರು ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೈನುಗಾರಿಕೆ ನಿರಂತರ (ನಿಖರ) ಆದಾಯದ ಮೂಲವಾಗಿದೆ: ಅಮರೇಶ ಯಾದವ್

ಯುವಮಾರ್ಗ ಸುದ್ದಿ



**ಮಸ್ಕಿ ಜ 29 –** ಹೈನುಗಾರಿಕೆ ನಿರಂತರ (ನಿಖರ) ಆದಾಯದ ಮೂಲವಾಗಿದೆ. ಅದಕ್ಕಾಗಿ ಮಹಿಳೆಯರು ಹಾಲಿನ ಸಂಘಗಳನ್ನು ಸ್ಥಾಪಿಸಿಕೊಂಡು ಆರ್ಥಿಕ ಸ್ವಾವಲಂಬನೆ ಹೊಂದಬೇಕಾಗಿದೆ. ಸಬ್ಸಿಡಿ ದರದಲ್ಲಿ ದೊರೆಯುವ ಉತ್ತಮ ತಳಿಯ ರಾಸುಗಳನ್ನು ಖರೀದಿಸಿ ಅವುಗಳ ಆರೋಗ್ಯ ಮತ್ತು ಆಹಾರದ ಬಗ್ಗೆ ಕಾಳಜಿವಹಿಸುವಂತೆ ತಿಳಿಸಿ, ವೈಜ್ಞಾನಿಕ ಆಹಾರ ಪದ್ಧತಿ ಅನುಸರಿಸಿ ಸರಕಾರ ದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿ ಅಧಿಕ ಹಾಲು ಉತ್ಪಾದನೆಯ ಗುರಿ ಹೊಂದುವಂತೆ ಮಸ್ಕಿ ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಅಮರೇಶ ಯಾದವ ತಿಳಿಸಿದರು

ಅವರು ಮಸ್ಕಿ ತಾಲೂಕು ಪಂಚಾಯತ್ ಕಛೇರಿ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು–ಬಳ್ಳಾರಿ–ಕೊಪ್ಪಳ–ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ರಾಯಚೂರು–ಕೊಪ್ಪಳ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಮಸ್ಕಿ ಶಾಖೆ, ಸಹಕಾರ ಇಲಾಖೆ, ತಾಲೂಕು ಪಂಚಾಯತ್ ಮಸ್ಕಿ ಹಾಗೂ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳು ಇವರುಗಳ ಸಂಯುಕ್ತ ಆಶ್ರಯದಲ್ಲಿ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಏರ್ಪಡಿಸಿದ ವಿಶೇಷ ಕಾರ್ಯಕ್ರಮ ಉದ್ಘಾಸಿ ಮಾತನಾಡಿದರುಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ಶಶಿಧರ ಪಾಟೀಲ ಇವರ ಅನುಪಸ್ಥಿತಿಯಲ್ಲಿ ಕೆ.ಎಂ.ಎಫ್ ಹಾಲು ಒಕ್ಕೂಟದ ನಿರ್ದೇಶಕ ಅಮರಗುಂಡಪ್ಪ ವಹಿಸಿ ಸಹಕಾರ ಪಿತಾಮಹ ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿ ತಾಲೂಕಿನ ಪ್ರತಿ ಗ್ರಾಮದಲ್ಲಿ ನೂತನ ಹಾಲಿನ ಸಂಘಗಳಿಂದ ಮುಂದಿನ ದಿನಗಳಲ್ಲಿ ಪ್ರತಿ ದಿನ 50 ಸಾವಿರ ಲೀಟರ್ ಹಾಲು ಉತ್ಪಾದನೆಯ ಗುರಿ ಹೊಂದಿರುವ ಬಗ್ಗೆ ತಿಳಿಸಿ, ಇದಕ್ಕೆ ಬೇಕಾದ ಪಶು ಆಹಾರವನ್ನು ಸಬ್ಸಿಡಿ ದರದಲ್ಲಿ ಕೆ.ಎಂ.ಎಫ್. ಒಕ್ಕೂಟದಿಂದ ಒದಗಿಸುವುದಾಗಿ ತಿಳಿಸಿದರು.

ಮಸ್ಕಿ ತಾಲೂಕು ಪಂಚಾಯತ್ ಸಹಾಯಕ ನಇರ್ದೇಶಕ ಸೋಮನಗೌಡ ಪಾಟೀಲ ಮಾತನಾಡಿ ತಾಲೂಕು ಪಂಚಾಯತಿಯಿಂದ ಸಹಕಾರ ಸಂಘಗಳಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿಸಿ, ಕೇವಲ ಸಬ್ಸಿಡಿ ಪಡೆಯುವ ಉದ್ದೇಶದಿ ಂದ ಸಂಘಗಳನ್ನು ರಚಿಸಿಕೊಳ್ಳಬೇಡಿ, ತಮ್ಮ ಭವಿಷ್ಯದ ಆರ್ಥಿಕತೆಯ ಅನುಕೂಲಕ್ಕಾಗಿ ಸ್ಥಾಪಿಸಿಕೊಳ್ಳುವಂತೆ ಸಲಹೆ ನೀಡಿದರು. ಡಾ॥ ಮಲ್ಲಿಕಾರ್ಜುನ ಹೆಚ್ಚ ಕಮತಗಿ ಸಹಕಾರ ಇಲಾಖೆ (ಎ.ಆರ್.ಸಿ.ಎಸ್. ಕಛೇರಿ) ಸಿಂಧನೂರು ಇವರು ಸಹಕಾರ ಕ್ಷೇತ್ರ ಬೆಳೆದು ಬಂದ ದಾರಿ, ಕೃಷಿಯಲ್ಲಿ ಉಪಕಸಬುಗಳ ಅಳವಡಿಕೆ, ಉದ್ಯೋಗ

# ವಸತಿ ಸೌಲಭ್ಯಕ್ಕೆ ಮಾಜಿ ದೇವದಾಸಿ ಮಹಿಳೆಯರಿಂದ ಅರ್ಜಿ ಆಹ್ವಾನ

**ರಾಯಚೂರು ಜ,30–** ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಮತ್ತು ನಗರ ಫಲಾನುಭವಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ.

ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಫಲಾನುಭವಿಗಳಿಗೆ 262 ಮತ್ತು ನಗರ ಫಲಾನುಭವಿಗಳಿಗೆ 140 ವಸತಿ ಸೌಲಭ್ಯ ಕಲ್ಪಿಸಲು ಅನುದಾನವನ್ನು ರಾಜೀವ್ ಗಾಂಧಿ ವಸತಿ ನಿಗಮರವರಿಗೆ ಆಡಳಿತ್ಮಾತಕ ಅನುಮೋದನೆಯನ್ನು ನೀಡಿರುತ್ತಾರೆ. ಜಿಲ್ಲೆಯ ಮಾಜಿ ದೇವದಾಸಿ ಮಹಿಳೆಯರು ನಿವೇಶನ ಹೋದಿರುವ ವಸತಿ ರಹಿತ ಫಲಾನುಭವಿಗಳು ದೇವದಾಸಿ ಪುನರ್ವಸತಿ ಯೋಜನೆ ಜಿಲ್ಲಾ ಕಚೇರಿ ರಾಯಚೂರು, #1–5–166 ಸ್ಟಾರ್ ಫಂಕ್ಷನ್ ಹಾಲ್ ಎದುರುಗಡೆ, ಬಾಲಾಜಿ ಕಾಂಪ್ಲೆಕ್ಸ್ ಹತ್ತಿರ, ಗೋಡ ಶೇಡ್ ಏರಿಯಾ ರಾಯಚೂರು–584101, ದಿನಾಂಕ:01–02–2026 ರಿಂದ 28–02–2026ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕ ಯೋಜನಾಷ್ಠಾನಧಿಕಾರಿಗಳು ಮಾನ್ವಿ, ಸಿರವಾರ, ರಾಯಚೂರು ಮೊಬೈಲ್ ಸಂಖ್ಯೆ: 7406034925, ದೇವದುರ್ಗ: 9980879540 ಲಿಂಗಸೂಗೂರು, ಮಸ್ಕಿ ಹಾಗೂ ಸಿಂಧನೂರು: 8861454090ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಡಲೇಕಾಳು ಖರೀದಿ ಕೇಂದ್ರಗಳ ಸ್ಥಾಪನೆ: ಸದುಪಯೋಗಕ್ಕೆ ಜಿಲ್ಲಾಧಿಕಾರಿಗಳ ಮನವಿ

**ರಾಯಚೂರು ಜ,30–** ಜಿಲ್ಲೆಯಲ್ಲಿ 2025–26ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೇಕಾಳು ಉತ್ಪನ್ನವನ್ನು ಖರೀದಿಸಲು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ರೈತರು ಸರ್ಕಾರದ ಯೋಜನೆಯ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕೋರಿದ್ದಾರೆ.

ಸರ್ಕಾರದ ಆದೇಶದಂತೆ 2025–26ನೇ ಸಾಲಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಕಡಲೇಕಾಳು ಉತ್ಪನ್ನವನ್ನು ಪ್ರತಿ ಎಕರೆಗೆ 4.00 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಟ 40 ಕ್ವಿಂಟಾಲ್ ನಂತೆ ಖರೀದಿಸಲು ಫ್ರೂಟ್ಸ್ ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ಕಡಲೇಕಾಳು ಬೆಳೆದ ಜಮೀನಿನ ವಿಸ್ತೀರ್ಣಕ್ಕೆ ಅನುಗುಣವಾಗುವಂತೆ ಖರೀದಿ ಪ್ರಮಾಣ ನಿಗದಿಪಡಿಸಿದ್ದು, ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್ ಗೆ ರೂ.5,875 ರಂ ತೆ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಲಾಗುವುದು. ದಿನಾಂಕ: 29–01–2026 ರಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ನೋಂದಣಿ ಮಾಡಿಕೊಳ್ಳತಕ್ಕದ್ದು. ನೋಂದಣಿ ಕಾರ್ಯದ ಜೊತೆಗೆ ಖರಿದಿ ಪ್ರಕ್ರಿಯೆಯನ್ನು 90 ದಿನಗಳವರೆಗೆ ಖರೀದಿ ಮಾಡಲಾಗುವುದು. ರೈತರಿ ಂದ ಕಡಲೇಕಾಳು ಖರೀದಿಸುವ ಸಂಬಂಧ ಈ ಕೆಳಕಂಡ ಖರೀದಿ ಕೇಂದ್ರಗಳನ್ನು ತೆರೆಯಾಲಾಗಿದ್ದು, ರೈತ ಬಾಂಧವರು ಫ್ರೂಟ್ಸ್ ಐ.ಡಿ ಯೊಂದಿಗೆ ತಮ್ಮ ಹತ್ತಿರದ ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿ ಕಡಲೇಕಾಳು ಮಾರಾಟ ಮಾಡಿ ಸರ್ಕಾರದ ಯೋಜನೆಯ ಸದುಪಯೋಗ ಪಡಿಸಿಕೊಳ್ಳಲು ಜಿಲ್ಲೆಯ ರೈತ ಬಾಂಧವರಲ್ಲಿ ಕೋರಲಾಗಿದೆ.**ಖರೀದಿ ಕೇಂದ್ರಗಳು:** ರಾಯಚೂರು ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ರಾಯಚೂರ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘ,ನಿ ಮೊ.ನಂ: 9611493098, ಯರಗೇರಾ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ. 9663802434, ಕಲ್ಮಲಾ ಓ.ಜಿ.ಸಿ.ಎಸ್ ಮೊ.ನಂ: 8073143738, ಗಿಲ್ಲೆಸ್ಗೂರ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ. 9901492394, ಗೋನಾಳ ಎಫ್.ಪಿ.ಓ (ಗೋನಾಳ) ಮೊ.ನಂ: 9008079008, ಜಾಗಿರ ವೆಂಕಟಾಪೂರ ಎಫ್.ಪಿ.ಓ(ಮರಡಿ ಗಂಗಾಧರ) ಮೊ.ನಂ: 6360410635, ಹುಣಸಿಹಾಳಹುಡಾ ಕ್ಯಾಂಪ್ ಓ.ಜಿ.ಸಿ.ಎಸ್ ಮೊ.ನಂ: 9743695467, ದೇವಸೂಗೂರ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ: 9880005759, ಸುಲ್ತಾನಪುರ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ: 8310542322ಗೆ ರೈತರು ಸಂಪರ್ಕ ಮಾಡಬಹುದಾಗಿದೆ. ದೇವದುರ್ಗ ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ತಾಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಾಕರ ಸಂಘ.ನಿ.ದೇವದುರ್ಗ ಮೊ.ನಂ:990119 5725, ಪ್ರಾ.ಕೃ.ಪ.ಸ.ಸಂ ಘ.ನಿ. ಜಾಲಹಳ್ಳಿ. ಮೊ.ನಂ: 8792840625, ಪ್ರಾ.ಕೃ.ಪ.ಸ.ಸಂಘ.ನಿ. ಅರಕೇರಾ ಮೊ.ನಂ: 9008504467, ಎಫ್.ಪಿ.ಓ ಮದರಕಲ್ ಮೊ.ನಂ: 8904175493, ದೇವದುರ್ಗ ಎಫ್.ಪಿ.ಓ ಗಬ್ಬೂರು ಮೊ.ನಂ: 9591411492,8431710456, ಪ್ರಾ.ಕೃ.ಪ.ಸ.ಸಂಘ.ನಿ. ಮಸರಕಲ್ ಮೊ.ನಂ: 9900772919ಗೆ ರೈತರು ಸಂಪರ್ಕ ಮಾಡಬಹುದಾಗಿದೆ. ಮಾನವಿ ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ಟಿ.ಎ.ಪಿ.ಸಿ.ಎಂ.ಎಸ್ ಮಾನವಿ ಮೊ.ನಂ: 9845014825, ಪ್ರಾ.ಕೃ.ಪ.ಸ.ಸಂಘ.ನಿ. ಕುರ್ಡಿ ಮೊ.ನಂ: 9900993648, ಪ್ರಾ.ಕೃ.ಪ.ಸ.ಸಂಘ.ನಿ.ಅನ್ವರಿ ಮೊ.ನಂ: 7090239798, ಪ್ರಾ.ಕೃ.ಪ.ಸ.ಸಂಘ.ನಿ. ಬ್ಯಾಗವಾಟ ಮೊ.ನಂ: 9902 943958, ಪ್ರಾ.ಕೃ.ಪ.ಸ.ಸಂಘ.ನಿ. ತೋರಣದಿನ್ನಿ ಮೊ.ನಂ: 9900834083, ಪ್ರಾ.ಕೃ.ಪ.ಸ.ಸಂಘ.ನಿ. ಎನ್.ಹೊಸೂರು ಮೊ.ನಂ: 9900991282, ಎಫ್.ಪಿ.ಓ(ಸುಬೀಕ್ಷ) ಪೋತ್ನಾಳ ಮೊ.ನಂ: 9986363250ಗೆ ರೈತರು ಸಂಪರ್ಕ ಮಾಡಬಹುದಾಗಿದೆ.ಲಿಂಗಸೂಗುರು ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ಟಿ.ಎ.ಪಿ.ಸಿ.ಎಂ.ಎಸ್ ಲಿಂಗಸುಗುರು ಮೊ.ನಂ: 9964851546, ಪ್ರಾ.ಕೃ.ಪ.ಸ.ಸಂಘ.ನಿ. ಮುದಗಲ್ ಮೊ.ನಂ: 9980681521, ಕರಡಕಲ್ ವಿ.ಪ್ರಾ.ಗ್ರಾ.ಕೃ.ಸ.ಸಂನಿ ಮೊ.ನಂ: 9632103535, ಪ್ರಾ.ಕೃ.ಪ.ಸ.ಸಂಘ.ನಿ.ಗೆಜ್ಜಲಗಟ್ಟ. ಮೊ.ನಂ: 9739253619, ಪ್ರಾ.ಕೃ.ಪ.ಸ.ಸಂಘ.ನಿ. ಮಾವಿನ ಬಾವಿ ಮೊ.ನಂ: 9902814649, ಪ್ರಾ.ಕೃ.ಪ.ಸ.ಸ ಂಘ.ನಿ. ಬಯ್ಯಾಪೂರು ಮೊ.ನಂ: 7259575910, ಪ್ರಾ.ಕೃ.ಪ.ಸ.ಸಂಘ.ನಿ. ನಾಗಲಪೂರು ಮೊ.ನಂ: 9972382185, ಅರೂಡ ಎಫ್.ಪಿ.ಓ ಗುಡದನಾಳ ಮೊ.ನಂ: 9880668127, ಪ್ರಾ.ಕೃ.ಪ.ಸ.ಸಂಘ.ನಿ. ಚಿಕ್ಕಹೆಸರೂರು ಮೊ.ನಂ: 9008650141, ಪ್ರಾ.ಕೃ.ಪ.ಸ.ಸಂಘ.ನಿ.ಗುರುಗುಂಟಾ ಮೊ.ನಂ: 9972 501671, ಮಾಕಾಪುರ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ.: 9380120752, ಪ್ರಾ.ಕೃ.ಪ.ಸ.ಸಂಘ.ನಿ. ಹೊನ್ನಳ್ಳಿ. ಮೊ.ನಂ: 8147192737, ಪ್ರಾ.ಕೃ.ಪ.ಸ. ಸಂಘ.ನಿ ಗೌಡೂರು ಮೊ.ನಂ: 9481674336, ಅಮದಿಹಾಳ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ: 8197259538, ಎಫ್.ಪಿ.ಓ ಹಟ್ಟಿ ಮೊ.ನಂ: 9632194714, ದೇವರಭೂಪುರ ವಿ.ಪ್ರಾ.ಗ್ರಾ.ಕೃ.ಸ. ಸಂ.ನಿ ಮೊ.ನಂ: 9902216032, ಮುದಗಲ್ ಎಫ್.ಪಿ.ಓ (ಶ್ರೀಸದ್ಗುರು) ಮೊ.ನಂ: 9980681 521ಗೆ ರೈತರು ಸಂಪರ್ಕ ಮಾಡಬಹುದಾಗಿದೆ.ಮಸ್ಕಿ ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ಪ್ರಾ.ಕೃ.ಪ. ಸ.ಸಂಘ.ನಿ.ಮಸ್ಕಿ ಮೊ.ನಂ: 99022040282, ಪ್ರಾ.ಕೃ.ಪ.ಸ.ಸಂಘ.ನಿ. ಮಟ್ಟೂರು ಮೊ.ನಂ: 7259 482300, ಪ್ರಾ.ಕೃ.ಪ.ಸ.ಸಂಘ.ನಿ. ಮೆದಿಕಿನಾಳ ಮೊ.ನಂ: 9164116935, ಪ್ರಾ.ಕೃ.ಪ.ಸ.ಸಂಘ.ನಿ. ಗುಡದೂರು ಮೊ.ನಂ: 94489 14106, ಪ್ರಾ.ಕೃ. ಪ.ಸ.ಸಂಘ.ನಿ. ಪಮನಕಲ್ಲೂರು ಮೊ.ನಂ: 9731 559317, ಪ್ರಾ.ಕೃ.ಪ.ಸ.ಸಂಘ.ನಿ. ಸಂತೆಕಲ್ಲೂರು ಮೊ.ನ:.8123755868, ಬ್ರಹ್ಮಶ್ರೀ ಎಫ್.ಪಿ.ಓ ಗುಂಢಾ ಮೊ.ನಂ: 9449064099, ಉದ್ಬಾಳ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ: 9740583413, ಹಂಪನಾಳ ಪ್ರಾ.ಗ್ರಾ.ಕೃ.ಸ.ಸಂ.ನಿ. ಮೊ.ನ: 6360444352, ದಿನಸಮುದ್ರ ವಿ.ಪ್ರಾ.ಗ್ರಾ.ಕೃ.ಸ.ಸಂ.ನಿ ಮೊ.ನಂ: 9916996619ಗೆ ರೈತರು ಸಂಪರ್ಕ ಮಾಡಬಹುದಾಗಿದೆ.ಸಿಂಧನೂರು ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ಟಿ.ಎ.ಪಿ.ಸಿ.ಎಂ.ಎಸ್. ಸಿಂಧನೂರು.ಮೊ.ನಂ: 9071004444, ಪ್ರಾ.ಕೃ.ಪ.ಸ.ಸಂಘ.ನಿ.ಜವಳಗೇರಾ ಮೊ.ನಂ: 9742036608, ಪ್ರಾ.ಕೃ.ಪ.ಸ.ಸಂಘ.ನಿ. ಬಳಗನೂರು ಮೊ.ನಂ: 7259992555, ಚೌಡೇಶ್ವರಿ ಎಫ್.ಪಿ.ಓ. ತುರ್ವಿಹಾಳ ಮೊ.ನಂ: 9742366679, ಪ್ರಾ.ಕೃ.ಪ.ಸ.ಸಂಘ.ನಿ. ಬಾದರ್ಲಿ ಮೊ.ನಂ: 9008555540, ಚಿಕ್ಕಬೇರ್ಗಿ ಎಫ್.ಪಿ.ಓ ಮೊ.ನಂ: 8746046467, ಧಾನ್ಯ ಎಫ್.ಪಿ.ಓ. ಕಲಮಂಗಿ ಮೊ.ನಂ: 8722880240, ತಾಲೂಕು ಕೃಷಿ ಸಂಸ್ಕರಣ ಮತ್ತು ಮಾರಾಟ ಸಹಾಕರ ಸಂಘನಿ. ಅರಗಿನಮರ ಕ್ಯಾಂಪ್ ಮೊ.ನಂ:99726 97653, ಅಕ್ಷಯ ಎಫ್.ಪಿ.ಓ ಹತ್ತಿಗುಡ್ಡ, ಮೊ.ನಂ:9741610266, ಉಮಲೂಟಿ ಪ್ರಾ.ಕೃ.ಪ.ಸ.ಸಂಘ.ನಿ. ಮೊ.ನಂ: 9845020712, ಎಫ್.ಪಿ.ಓ (ಭೀಮಲಿಂಗೇಶ್ವರ) ಗೊಬ್ಬರಕಲ್ ಮೊ.ನಂ: 9449244102ಗೆ ರೈತರ ಸಂಪರ್ಕ ಮಾಡಬಹುದಾಗಿದೆ. ಸಿರವಾರ ತಾಲೂಕಿನಲ್ಲಿ ಖರೀದಿ ಕೇಂದ್ರಗಳಾದ ಪ್ರಾ.ಕೃ.ಪ.ಸ.ಸಂಘ.ನಿ. ಸಿರವಾರ ಮೊ.ನಂ: 9972961199, ಪ್ರಾ.ಕೃ.ಪ.ಸ.ಸಂಘ.ನಿ. ಕವಿತಾಳ ಮೊ.ನಂ:7259842464, ಪ್ರಾ.ಕೃ.ಪ.ಸ. ಸಂಘ.ನಿ. ಹಿರೆಹಣಗಿ ಮೊ.ನಂ: 9845809972, ಪ್ರಾ.ಕೃ.ಪ.ಸ.ಸಂಘ.ನಿ. ಹರವಿ ಮೊ.ನಂ: 9739 752256, ಪ್ರಾ.ಕೃ.ಪ.ಸ.ಸಂಘ.ನಿ., ಕಲ್ಲೂರು ಮೊ.ನಂ: 636082 3550, ಅತ್ತನೂರು ಪ್ರಾ.ಕೃ.ಪ.ಸ.ಸಂಘ.ನಿ. ಮೊ.ನಂ: 9743125282ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜಿಲ್ಲಾಡಳಿತದಿಂದ ಫೆ.01ರಂದು ಮಡಿವಾಳ ಮಾಚಿದೇವ ಜಯಂತಿ

**ರಾಯಚೂರು ಜ,30–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಮಾಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಫೆ.1ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ರಾಯಚೂರಿನ ಸೀತಾ ಸುಬ್ಬ ರಾಜು ಸ್ಮಾರಕ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯರಾದ ಪರಮೇಶ್ವರ ಸಾಲಿಮಠ ಅವರು ಮಾಡಿವಾಳ ಮಾಚಿದೇವ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111, 9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H